ವಿಜಯಪುರ | ಸಂಪುಟ 04 | ಸಂಚಿಕೆ 183 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯರಶ್ಮಿ

Udayarashmi Kannada Daily

ಜನಪರ-ಜೀವಪರ


ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಸೆಪ್ಟೆಂಬರ್, 12, 2026

"ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ದೇಶಭಕ್ತಿಯ ಕಿಚ್ಚು ಹಚ್ಚಿದ ವಂದೇ ಮಾತರಂ ಹಾಡು ಮೊಟಕುಗೊಳಿಸುವ ಕೆಲಸ ಡಿ.ಕೆ. ಶಿವಕುಮಾರ್ ಮಾಡುತ್ತಿದ್ದಾರೆ. ಅಲ್ಪಸಂಖ್ಯಾತರ ಓಲೈಕೆಗಾಗಿ ಹಾಡಿಗೆ ಕತ್ತರಿ ಹಾಕಲಾಗುತ್ತಿದೆಯೇ? ನಿಮ್ಮ ದೇಶಪ್ರೇಮ ಎಲ್ಲಿದೆ? ಈ ಸರ್ಕಾರ ಕಿತ್ತೊಗೆಯಲು ಈ ವಿಚಾರವೂ ಒಂದು ಕಾರಣವಾಗಲಿದೆ"



■ ಪ್ರಹ್ಲಾದ ಜೋಷಿ
ಕೇಂದ್ರ ಸಚಿವರು

# ನಾಟಕ ಅಕಾಡೆಮಿಯಿಂದ ರಂಗಭೂಮಿ ಸದೃಢಗೊಳಿಸುವ ಕಾರ್ಯ

■ ಉದಯರಶ್ಮಿ ದಿನಪತ್ರಿಕೆ



**ವಿಜಯಪುರದಲ್ಲಿ 3 ದಿನಗಳ ರಂಗಭೂಮಿ ನಾಟಕೋತ್ಸವ। ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ಡಾ. ಕೆ.ವಿ. ನಾಗರಾಜ್ ಮೂರ್ತಿ ಹೇಳಿಕೆ**

ವಿಜಯಪುರ : ಗ್ರಾಮೀಣ ರಂಗಭೂಮಿ, ವೃತ್ತಿ ರಂಗಭೂಮಿ ಮತ್ತು ಪೌರಾಣಿಕ ರಂಗಭೂಮಿಯ ನಾಟಕೋತ್ಸವಗಳನ್ನು ರಾಜ್ಯದ ಹಲವು ಜಿಲ್ಲೆಗಳಲ್ಲಿ ಆಯೋಜಿಸಲಾಗುತ್ತಿದೆ. ಸೆ. 10ರಿಂದ ಪ್ರಾರಂಭವಾದ ಕಲ್ಯಾಣ ಕರ್ನಾಟಕದ ವೃತ್ತಿ ರಂಗಭೂಮಿ ನಾಟಕೋತ್ಸವ ಈ ನಿಟ್ಟಿನಲ್ಲಿ ಮಹತ್ವದ್ದಾಗಿದೆ. ವಿಜಯಪುರ ಜಿಲ್ಲೆಯ ವಿವಿಧ ವೃತ್ತಿ ರಂಗಭೂಮಿ ಕಲಾವಿದರಿಂದ ಮೂರು ದಿನಗಳ ನಾಟಕೋತ್ಸವವನ್ನು ಸೆ.10 ರಿಂದ 12ರವರೆಗೆ ಆಯೋಜಿಸಲಾಗಿದೆ ಎಂದು ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷರಾದ ಡಾ. ಕೆ.ವಿ. ನಾಗರಾಜ್ ಮೂರ್ತಿ ಹೇಳಿದರು.

ನಗರದ ಕಂದಗಲ್ ಹಣಮಂತರಾಯ ರಂಗಮಂದಿರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ. 10 ರಂದು ಗ್ರಾಮ ಪಂಚಾಯಿತಿ ಗಂಗವ್ವ ನಾಟಕ ಪ್ರದರ್ಶನಗೊಂಡಿದೆ. ಸೆ.11 ರಂದು ಗಂಡನಿಗೆ ತಕ್ಕ ಹೆಂಡತಿ ಹಾಗೂ ಸೆ. 12 ರಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ನಾಟಕ ಪ್ರದರ್ಶನಗೊಳ್ಳಲಿದೆ ಎಂದರು.

ಕಳೆದ ಎರಡೂವರೆ ವರ್ಷಗಳಲ್ಲಿ ರಾಜ್ಯಾದ್ಯಂತ ವರ್ಷಗಳು ಭರ್ತಿಯಾಗಿದ್ದು, ಈ ಸಂದರ್ಭದಲ್ಲಿ ಅಕಾಡೆಮಿಯು ರಾಜ್ಯಾದ್ಯಂತ ಹಲವಾರು ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿದೆ. ವಿಶೇಷವಾಗಿ, ರಂಗ ದಿಗ್ಗಜರ ಹೆಸರಿನಲ್ಲಿ ವಿಭಾಗೀಯ ನಾಟಕೋತ್ಸವಗಳು, ಜಿಲ್ಲಾ ನಾಟಕೋತ್ಸವಗಳು, ಕಾಲೇಜು ವಿದ್ಯಾರ್ಥಿಗಳಿಗೆ ರಂಗ ತರಬೇತಿ ಶಿಬಿರ, ಕರ್ನಾಟಕದ 31 ಜಿಲ್ಲೆಗಳಲ್ಲಿ ಏಕಕಾಲಕ್ಕೆ ವಿಶ್ವ ರಂಗಭೂಮಿ ದಿನಾಚರಣೆ, ರಾಷ್ಟ್ರೀಯ ವಿಚಾರ ಸಂಕಿರಣಗಳು ಮತ್ತು ಹೊರನಾಡ ನಾಟಕೋತ್ಸವಗಳನ್ನು ಆಯೋಜಿಸಿದೆ ಎಂದರು.

ರಂಗ ಸಾಹಿತ್ಯ, ರಂಗ ನೃಪಥ್ಯ ಶಿಲ್ಪ, ಹೀಗೆ ರಂಗಭೂಮಿಯ ವಿವಿಧ ಪ್ರಾಕಾರಗಳಲ್ಲಿ ಕೆಲಸ ಮಾಡುತ್ತಿರುವ ಕಲಾವಿದರ ಸಂಖ್ಯೆ ಅಸಂಖ್ಯಾತವಾಗಿದೆ. ಆದಾಗ್ಯೂ ಅಕಾಡೆಮಿಯು ಅರ್ಹರನ್ನು ಗುರುತಿಸಿ ಕಳೆದ ಎರಡೂವರೆ ವರ್ಷಗಳಲ್ಲಿ 160ಕ್ಕೂ ಹೆಚ್ಚು ಕಲಾವಿದರಿಗೆ ಪ್ರಶಸ್ತಿಗಳನ್ನು ನೀಡಿ ಗೌರವಿಸಿದೆ.

ಆದರೆ ಒಂದು ವರ್ಷಕ್ಕೆ 20 ಪ್ರಶಸ್ತಿಗಳು ಮಾತ್ರ ಇದ್ದು, ಎಲ್ಲಾ ಜಿಲ್ಲೆಗಳನ್ನು ಪ್ರತಿನಿಧಿಸಿ, ಪ್ರಶಸ್ತಿ ನೀಡುವುದು ಒಂದು ದೊಡ್ಡ ಸವಾಲಾಗಿದೆ. ಆದರೂ ಪ್ರಾಮಾಣಿಕವಾಗಿ ಈ

ಹತ್ತು ಹಲವು ವಿನೂತನ ಕಾರ್ಯಕ್ರಮಗಳ ಮೂಲಕ ರಂಗಭೂಮಿಯನ್ನು ಸದೃಢಗೊಳಿಸುವ ಕಾರ್ಯವನ್ನು ನಾಟಕ ಅಕಾಡೆಮಿ ಬಲು ಅಚ್ಚುಕಟ್ಟಾಗಿ ಮಾಡುತ್ತಿದೆ ಎಂದರು.

ಕರ್ನಾಟಕ ನಾಟಕ ಅಕಾಡೆಮಿಯು ಪುನರ್ ರಚನೆಗೊಂಡು ಎರಡೂವರೆ

ವರ್ಷಕ್ಕೆ ಕೇವಲ 20 ಪ್ರಶಸ್ತಿಗಳು: ಕರ್ನಾಟಕ ರಂಗಭೂಮಿಗಾಗಿ ಸೇವೆ ಸಲ್ಲಿಸಿ ಪ್ರಶಸ್ತಿಗೆ ಭಾಜನರಾಗಲು ಅರ್ಹರಿರುವ ಸಾವಿರಾರು ಕಲಾವಿದರು ಕರ್ನಾಟಕದಲ್ಲಿದ್ದಾರೆ. ವಿಶೇಷವಾಗಿ, ವೃತ್ತಿ ರಂಗಭೂಮಿ, ಹವ್ಯಾಸಿ ರಂಗಭೂಮಿ, ಗ್ರಾಮೀಣ ರಂಗಭೂಮಿ ಹಾಗೂ ಬೀಡಿ ನಾಟಕ ಕ್ಷೇತ್ರ,

ಕೆಲಸವನ್ನು ಅಕಾಡೆಮಿ ಮಾಡಿಕೊಂಡು ಬರುತ್ತಿದೆ ಎಂದರು.

ಈ ಸಂದರ್ಭದಲ್ಲಿ ನಾಟಕ ಅಕಾಡೆಮಿ ಸದಸ್ಯೆ ಜ್ಯೋತಿ ಮಂಗಳೂರು, ಮಾಜಿ ಅಧ್ಯಕ್ಷ ಶೇಖ್ ಮಾಸ್ತರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಂತೋಷ ಭೋವಿ ಮತ್ತಿತರರು ಉಪಸ್ಥಿತರಿದ್ದರು.

# ಜಾತಿ ಗಣತಿ ವರದಿ ಶೀಘ್ರ ಜಾರಿಗೆ ಬರಲಿ

**ಸಿದ್ದರಾಮಯ್ಯ ರಾಜಕೀಯ ನಿವೃತ್ತಿ ಹೇಳಿಕೆಗೆ ರಾಹುಲ್ ಗಾಂಧಿ ಆಕ್ಷೇಪ। ಎರಡು ಸಚಿವ ಸ್ಥಾನ ಭರ್ತಿಗೆ ಪ್ರಸ್ತಾಪ। ಮಾಜಿ ಸಿಎಂ ಸಿದ್ದರಾಮಯ್ಯ ಒತ್ತಾಯ**

ನವದೆಹಲಿ: ಮಾಜಿ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಕಾರ್ಯಕಾರಿ ಸಮಿತಿ(CWC) ಸದಸ್ಯ ಸಿದ್ದರಾಮಯ್ಯ ಅವರು ಶುಕ್ರವಾರ ದೆಹಲಿಯಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾದರು.

ಈ ವೇಳೆ ಅವರು ಪಕ್ಷ ಮತ್ತು ಕರ್ನಾಟಕದ ರಾಜಕೀಯಕ್ಕೆ ಸಂಬಂಧಿಸಿದ ಹಲವು ವಿಷಯಗಳ ಕುರಿತು ಚರ್ಚೆ ನಡೆಸಿದರು.

ಕರ್ನಾಟಕದಲ್ಲಿ ಖಾಲಿ ಇರುವ ಎರಡು ಸಚಿವ ಸ್ಥಾನದ ವಿಷಯವನ್ನು ಸಿದ್ದರಾಮಯ್ಯ ಅವರು ಪ್ರಸ್ತಾಪಿಸಿದ್ದು, ಅದನ್ನು ಆದಷ್ಟು ಬೇಗ ಭರ್ತಿ ಮಾಡುವಂತೆ ರಾಹುಲ್ ಗಾಂಧಿಗೆ ಕೇಳಿಕೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ರಾಜಕೀಯ ಮತ್ತು ಸಾಂಸ್ಥಿಕ ಅವಕಾಶಗಳ ಕುರಿತು ನಿರ್ಧಾರ ಕೈಗೊಳ್ಳುವಾಗ 'ಅಹಿಂದ' ವರ್ಗಗಳ ಹಿತಾಸಕ್ತಿಗಳನ್ನು ರಕ್ಷಿಸುವ ಅಗತ್ಯವನ್ನೂ ಸಿದ್ದರಾಮಯ್ಯ ಅವರು ಒತ್ತಿಹೇಳಿದ್ದಾರೆ ಎಂದು ತಿಳಿದುಬಂದಿದೆ.

ಇದೇ ವೇಳೆ ಕರ್ನಾಟಕದಲ್ಲಿ ಜಾತಿ ಗಣತಿ ವರದಿಯನ್ನು ಶೀಘ್ರವಾಗಿ ಜಾರಿಗೆ ತರುವಂತೆಯೂ



ಮಾಜಿ ಸಿಎಂ ಸಿದ್ದರಾಮಯ್ಯ ಅವರು ರಾಹುಲ್ ಗಾಂಧಿಗೆ ಒತ್ತಾಯಿಸಿದ್ದಾರೆ.

ಜಾತಿ ಗಣತಿ ವರದಿಯ ಶಿಫಾರಸುಗಳನ್ನು ಯಾವುದೇ ವಿಳಂಬವಿಲ್ಲದೆ ಜಾರಿಗೆ ತರಬೇಕು ಎಂಬ ಅಭಿಪ್ರಾಯವನ್ನು ಅವರು ವ್ಯಕ್ತಪಡಿಸಿದ್ದಾರೆ ಎಂದು ತಿಳಿದುಬಂದಿದೆ.

## ರಾಜಕೀಯ ನಿವೃತ್ತಿ ಕುರಿತು ಬಹಿರಂಗ ಹೇಳಿಕೆ ನೀಡಬೇಡಿ

2028ರ ವಿಧಾನಸಭೆ ಚುನಾವಣೆಯಲ್ಲಿ ತಾನು ಸ್ಪರ್ಧೆ ಮಾಡಲ್ಲ ಎಂದು ಹೇಳುವ ಮೂಲಕ ಚುನಾವಣಾ ರಾಜಕೀಯಕ್ಕೆ ನಿವೃತ್ತಿ ಘೋಷಿಸಿದ್ದ ಮಾಜಿ ಸಿಎಂ ಸಿದ್ದರಾಮಯ್ಯ ಅವರ ಹೇಳಿಕೆ ರಾಜ್ಯ ರಾಜಕೀಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿತ್ತು.



ಇದೀಗ ಈ ವಿಚಾರವಾಗಿ ರಾಹುಲ್ ಗಾಂಧಿ ಅವರು ಸಿದ್ದರಾಮಯ್ಯನವರಿಗೆ ಒಂದಿಷ್ಟು ಸಲಹೆ ನೀಡಿದ್ದು, ರಾಜಕೀಯ ನಿವೃತ್ತಿ ಕುರಿತು ಸಾರ್ವಜನಿಕವಾಗಿ ಪದೇಪದೇ ಹೇಳಿಕೆ ನೀಡಬೇಡಿ ಎಂದು ಹೇಳಿದ್ದಾರೆ. ನಿಮ್ಮ ಹೇಳಿಕೆಯಿಂದ ಕಾಂಗ್ರೆಸ್ ಪಕ್ಷಕ್ಕೆ ಡ್ಯಾಮೇಜ್ ಆಗಬಹುದು. ಪಕ್ಷಕ್ಕೆ ನಿಮ್ಮಂತಹ ಹಿರಿಯ ನಾಯಕರ ಅವಶ್ಯಕತೆ ಬಹಳ ಇದೆ. ಹೀಗಾಗಿ ಇಂತಹ ಹೇಳಿಕೆ ನೀಡಬೇಡಿ ಎಂದು ರಾಹುಲ್ ಗಾಂಧಿ ಅವರು ಸಿದ್ದರಾಮಯ್ಯಗೆ ಹೇಳಿದ್ದಾರೆ ಎನ್ನಲಾಗಿದೆ.

**ಪದ್ಮರಾಜ ಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕ ಪ್ರಶಾಂತ ಕುಲಕರ್ಣಿ ಹೇಳಿಕೆ**

# ಕೌಶಲ್ಯಕ್ಕೆ ಉದ್ಯಮದ ಸ್ಪರ್ಶ; ಮಹಿಳೆಗೆ ಸ್ವಾವಲಂಬನೆಯ ಶಕ್ತಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಮಹಿಳೆಯರು ತಮ್ಮಲ್ಲಿರುವ ಕೌಶಲ್ಯ ಹಾಗೂ ಪ್ರತಿಭೆಯನ್ನು ಗುರುತಿಸಿಕೊಂಡು ಅದನ್ನು ಉದ್ಯಮವಾಗಿ ಪರಿವರ್ತಿಸಿಕೊಳ್ಳುವ ಮೂಲಕ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದು ಪದ್ಮರಾಜ ಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕ ಪ್ರಶಾಂತ ಕುಲಕರ್ಣಿ ಹೇಳಿದರು.

ನಗರದ ಜಿ.ಪಿ. ಪೋರವಾಲ್ ಕಲಾ ವಾಣಿಜ್ಯ ಹಾಗೂ ವಿ ವಿ ಸಾಲಿಮಠ ವಿಜ್ಞಾನ ಪದವಿ ಮಹಾವಿದ್ಯಾಲಯದಲ್ಲಿ ಶುಕ್ರವಾರ ಮಹಿಳಾ ಘಟಕದ ವತಿಯಿಂದ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ 'ಮಹಿಳಾ ಸಬಲೀಕರಣಕ್ಕೆ ಉದ್ಯಮಶೀಲತೆಯ ಅಗತ್ಯತೆ' ವಿಷಯದ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಹಿಳಾ ಸಬಲೀಕರಣವೆಂದರೆ ಪುರುಷರೊಂದಿಗೆ ಸ್ಪರ್ಧಿಸುವುದಲ್ಲ. ಬದಲಾಗಿ ಶಿಕ್ಷಣ, ಜ್ಞಾನ, ಆರ್ಥಿಕ ಸ್ವಾವಲಂಬನೆ ಹಾಗೂ ಸ್ವತಂತ್ರವಾಗಿ ನಿರ್ಧಾರ ಕೈಗೊಳ್ಳುವ ಸಾಮರ್ಥ್ಯವನ್ನು ಹೊಂದುವುದಾಗಿದೆ. ಮಹಿಳೆಯರಲ್ಲಿರುವ ಕೌಶಲ್ಯಕ್ಕೆ ಸೂಕ್ತ ತರಬೇತಿ ಮತ್ತು ಮಾರುಕಟ್ಟೆ ಸಂಪರ್ಕ ದೊರೆತರೆ ಅದೇ ಕೌಶಲ್ಯ ಕುಟುಂಬದ ಆದಾಯದ ಮೂಲವಾಗುವುದರ ಜತೆಗೆ ಉದ್ಯೋಗ ಸೃಷ್ಟಿಸುವ ಸಾಮರ್ಥ್ಯವನ್ನೂ ಹೊಂದಿದೆ ಎಂದರು.

ಗ್ರಾಮೀಣ ಪ್ರದೇಶದ ಮಹಿಳೆಯರು ಕೃಷಿ, ಹೈನುಗಾರಿಕೆ, ಆಹಾರ ಸಂಸ್ಕರಣೆ, ಹೊಲಿಗೆ, ಕರಕುಶಲ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಅನುಭವ ಮತ್ತು ಕೌಶಲ್ಯ ಹೊಂದಿದ್ದಾರೆ. ಹಪ್ಪಳ, ಉಪ್ಪಿನಕಾಯಿ, ಮಸಾಲೆ ಪದಾರ್ಥ, ರಾಗಿ ಉತ್ಪನ್ನಗಳ ತಯಾರಿಕೆ ಸೇರಿದಂತೆ ಮನೆಯಲ್ಲೇ ನಡೆಯುವ ಚಟುವಟಿಕೆಗಳನ್ನು ಸೂಕ್ತ ರೀತಿಯಲ್ಲಿ ರೂಪಿಸಿ ಮಾರುಕಟ್ಟೆಗೆ ಪರಿಚಯಿಸಿದರೆ ಅವು ಯಶಸ್ವಿ ಉದ್ಯಮಗಳಾಗಬಹುದು. ಇದಕ್ಕೆ ಬಂಡವಾಳದ ಜತೆಗೆ ತರಬೇತಿ, ತಂತ್ರಜ್ಞಾನ, ಮಾರುಕಟ್ಟೆ ಹಾಗೂ ಕುಟುಂಬದ ಪ್ರೋತ್ಸಾಹ ಅಗತ್ಯ ಎಂದು ತಿಳಿಸಿದರು.

ಮಹಿಳೆಯರ ಆರ್ಥಿಕ ಸಬಲೀಕರಣದಲ್ಲಿ ಸ್ವಸಹಾಯ ಸಂಘಗಳು ಪ್ರಮುಖ ಪಾತ್ರ ವಹಿಸುತ್ತಿದ್ದು, ಸ್ತ್ರೀ ಶಕ್ತಿ, ಸಂಜೀವಿನಿ, ಉದ್ಯೋಗಿನಿ ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳನ್ನು ಮಹಿಳೆಯರು ಸದುಪಯೋಗಪಡಿಸಿಕೊಳ್ಳಬೇಕು. ಕೇವಲ ಉದ್ಯೋಗ ಪಡೆಯುವುದಕ್ಕಿಂತ ಉದ್ಯೋಗ ಸೃಷ್ಟಿಸುವ ಮನೋಭಾವವನ್ನು ಯುವತಿಯರು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

"ಉದ್ಯಮದ ಮೊದಲ ಲಾಭ ಹಣವಲ್ಲ; ಆತ್ಮವಿಶ್ವಾಸ. ಮಹಿಳೆಯ ಕೈಯಲ್ಲಿರುವ ಕೌಶಲ್ಯ ಉದ್ಯಮವಾಗಲಿ, ಉದ್ಯಮ ಆದಾಯವಾಗಲಿ, ಆದಾಯ ಸ್ವಾವಲಂಬನೆಯಾಗಲಿ" ಎಂದು ಪ್ರಶಾಂತ ಕುಲಕರ್ಣಿ ಹೇಳಿದರು. ಮಹಿಳಾ ಘಟಕದ ಸಂಯೋಜಕಿ ಪ್ರತಿಕಾ ತಳವಾರ, ಐಕ್ಯೂಎಸಿ ಘಟಕದ ಮುಖ್ಯಸ್ಥ ಬಸವರಾಜ ಮಹಾಜನಶೆಟ್ಟಿ, ಕಾಲೇಜಿನ ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗಣೇಶ ಚತುರ್ಥಿ: ಮದ್ಯ ಮಾರಾಟ ನಿಷೇಧಿಸಿ ಆದೇಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗೌರಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗೂ ವಿಸರ್ಜನೆ ಕಾಲಕ್ಕೆ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಹಾಗೂ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಎಲ್ಲ ತರಹದ ಮದ್ಯ ಮಾರಾಟ, ಸಂಗ್ರಹಣೆ ಹಾಗೂ ಹಂಚಿಕೆಯನ್ನು ನಿಷೇಧಿಸಿ ಜಿಲ್ಲಾ ದಂಡಾಧಿಕಾರಿಗಳಾದ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಆದೇಶ ಹೊರಡಿಸಿದ್ದಾರೆ.

ಗಣೇಶ ಮೂರ್ತಿ ಪ್ರತಿಷ್ಠಾಪನೆ ದಿನವಾದ ಸೆ.14ರ ಬೆಳಿಗ್ಗೆ 6ರಿಂದ ಸೆ.15ರ ಬೆಳಿಗ್ಗೆ 6 ಗಂಟೆಯವರೆಗೆ ಹಾಗೂ 5ನೇ ದಿನದ ಗಣೇಶ ಮೂರ್ತಿ ವಿಸರ್ಜನೆ ಪ್ರಯುಕ್ತ ಸೆ.18ರ ಬೆಳಿಗ್ಗೆ 6 ಗಂಟೆಯಿಂದ ಸೆ.19ರ ಬೆಳಿಗ್ಗೆ 6 ಗಂಟೆಯವರೆಗೆ, 7ನೇ ದಿನದ ವಿಸರ್ಜನೆ ಪ್ರಯುಕ್ತ ಸೆ.20ರ ಬೆಳಿಗ್ಗೆ 6 ಗಂಟೆಯಿಂದ ಸೆ.21ರ ಬೆಳಿಗ್ಗೆ 6 ಗಂಟೆಯವರೆಗೆ, 9ನೇ ದಿನದ ವಿಸರ್ಜನೆ ಪ್ರಯುಕ್ತ ಸೆ.22ರ ಬೆಳಿಗ್ಗೆ 6 ಗಂಟೆಯಿಂದ ಸೆ.23ರ ಬೆಳಿಗ್ಗೆ 6 ಗಂಟೆಯವರೆಗೆ ಹಾಗೂ 11ನೇ ದಿನದ ವಿಸರ್ಜನೆ ಪ್ರಯುಕ್ತ ಸೆ.24ರ ಬೆಳಿಗ್ಗೆ 6 ಗಂಟೆಯಿಂದ ಸೆ.25ರ ಬೆಳಿಗ್ಗೆ 6 ಗಂಟೆಯವರೆಗೆ ಜಿಲ್ಲೆಯಾದ್ಯಂತ ಎಲ್ಲ ತರಹದ ಮದ್ಯ ಮಾರಾಟ, ಸಂಗ್ರಹಣೆ ಮತ್ತು ಹಂಚಿಕೆಯನ್ನು ಸಂಪೂರ್ಣವಾಗಿ ನಿಷೇಧಿಸಿ ಆದೇಶಿಸಲಾಗಿದೆ.



# ಅಗ್ನಿವೀರ್ ನೇಮಕಾತಿ ರ್‍ಯಾಲಿ: ಪ್ರಕ್ರಿಯೆ ಪರಿಶೀಲಿಸಿದ ಡಿಸಿ, ಎಸ್ಪಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಭಾರತೀಯ ಸೇನೆಯ ವತಿಯಿಂದ ನಡೆಯುತ್ತಿರುವ ಅಗ್ನಿವೀರ್ ನೇಮಕಾತಿ ರ್‍ಯಾಲಿಯ 2ನೇ ದಿನದ ನೇಮಕಾತಿ ಪ್ರಕ್ರಿಯೆಯನ್ನು ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಪರಿಶೀಲಿಸಿದರು.

ನೇಮಕಾತಿ ರ್‍ಯಾಲಿಯ 2ನೇ ದಿನದ ಪ್ರಕ್ರಿಯೆಗೆ ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಅವರು ಚಾಲನೆ ನೀಡಿದರು.

ಬಳಿಕ ಕ್ರೀಡಾಂಗಣದಲ್ಲಿ ನಡೆಯುತ್ತಿದ್ದ ಅಭ್ಯರ್ಥಿಗಳ ಓಟ, ದೈಹಿಕ ಸಾಮರ್ಥ್ಯ ಪರೀಕ್ಷೆ ಸೇರಿದಂತೆ ವಿವಿಧ ಹಂತಗಳ ನೇಮಕಾತಿ ಪ್ರಕ್ರಿಯೆಯನ್ನು ವೀಕ್ಷಿಸಿ, ಸಂಬಂಧಿಸಿದ ಅಧಿಕಾರಿಗಳಿಂದ ಮಾಹಿತಿ ಪಡೆದರು. ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಅಗ್ನಿವೀರ್ ನೇಮಕಾತಿ ರ್‍ಯಾಲಿಯಲ್ಲಿ ಭಾಗವಹಿಸುತ್ತಿರುವ ಅಭ್ಯರ್ಥಿಗಳಿಗೆ ಅಗತ್ಯವಿರುವ ಎಲ್ಲ ಮೂಲಸೌಕರ್ಯ ಹಾಗೂ ಮೂಲಭೂತ ಸೌಲಭ್ಯಗಳನ್ನು ಜಿಲ್ಲಾಡಳಿತದ ವತಿಯಿಂದ ಕಲ್ಪಿಸಲಾಗಿದೆ ಎಂದು ತಿಳಿಸಿದರು. ನೇಮಕಾತಿ ಪ್ರಕ್ರಿಯೆಯಲ್ಲಿ ಸುಗಮ ರೀತಿಯಾಗಿ ನಡೆಸುವ ನಿಟ್ಟಿನಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ನಿಗದಿತ ನಿಯಮಗಳನ್ನು ಪಾಲಿಸಿ, ನೇಮಕಾತಿ ಪ್ರಕ್ರಿಯೆ ಸುಗಮವಾಗಿ ನಡೆಯಲು ಅಧಿಕಾರಿಗಳಿಗೆ ಸಹಕರಿಸುವಂತೆ ಮನವಿ ಮಾಡಿದರು.

# ಸೆ.23 ವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶ

**ಎಸ್‌ಐಆರ್: ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗಿನ। ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಹೇಳಿಕೆ**

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಹಕ್ಕು ಮತ್ತು ಆಕ್ಷೇಪಣೆಗಳ ಸಲ್ಲಿಕೆ ಹಾಗೂ ಪರಿಷ್ಕರಣೆ ಪ್ರಕ್ರಿಯೆಯ ಕುರಿತಾಗಿ ಜಿಲ್ಲಾ ಚುನಾವಣಾಧಿಕಾರಿಗಳಾದ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರ ಅಧ್ಯಕ್ಷತೆಯಲ್ಲಿ ಪ್ರಮುಖ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆಯಿತು.

ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಅವರು ಚುನಾವಣಾ ಆಯೋಗದ ನಿರ್ದೇಶನದಂತೆ ಆಗಸ್ಟ್ 24ರಂದು ಕರಡು ಮತದಾರರ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದ್ದು, ಸೆಪ್ಟೆಂಬರ್ 23ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶವಿದೆ ಎಂದು ತಿಳಿಸಿದರು.

ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗದ ಅರ್ಹ ಮತದಾರರು ಹಾಗೂ ಅಕ್ಟೋಬರ್ 1, 2026ಕ್ಕೆ 18 ವರ್ಷ ಪೂರ್ಣಗೊಳ್ಳುವ ಯುವಕ-ಯುವತಿಯರು ನಮೂನೆ-6ರ ಮೂಲಕ ಹೆಸರು ಸೇರ್ಪಡೆಗೆ ಅರ್ಜಿ ಸಲ್ಲಿಸಬಹುದು.

ಮತದಾರರು ತಹಶೀಲ್ದಾರ ಕಚೇರಿ ಅಥವಾ ಮತಗಟ್ಟೆ ಮಟ್ಟದ ಅಧಿಕಾರಿಗಳನ್ನು ಸಂಪರ್ಕಿಸುವುದರ ಜೊತೆಗೆ ಮತದಾರರ ಸೇವಾ ಪೋರ್ಟಲ್ ಮೂಲಕವೂ ಆನ್‌ಲೈನ್‌ನಲ್ಲಿ ಹೆಸರು ಸೇರ್ಪಡೆ ಹಾಗೂ ಅಗತ್ಯ ತಿದ್ದುಪಡಿಗಳಿಗೆ ಅರ್ಜಿ



ಸಲ್ಲಿಸಬಹುದಾಗಿದೆ ಎಂಬುದನ್ನು ತಿಳಿಸಿದರು. ಮತದಾರರ ಅನುಕೂಲಕ್ಕಾಗಿ ಸೆಪ್ಟೆಂಬರ್ 19 ಮತ್ತು 20ರಂದು ಜಿಲ್ಲೆಯಾದ್ಯಂತ ವಿಶೇಷ ಆಂದೋಲನ ಆಯೋಜಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಜಿಲ್ಲೆಯ ಪ್ರತಿಯೊಂದು ಮತಗಟ್ಟೆಯಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು ಲಭ್ಯವಿದ್ದು, ಮತದಾರರಿಂದ ವಿವಿಧ ಅರ್ಜಿಗಳನ್ನು ಸ್ವೀಕರಿಸಲಿದ್ದಾರೆ. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದರು.

ಆಕ್ಷೇಪಣೆ ಸಲ್ಲಿಸುವ ಪ್ರಕ್ರಿಯೆ ಕುರಿತು ಜಿಲ್ಲಾಧಿಕಾರಿ ಪಕ್ಷಗಳ ಪ್ರತಿನಿಧಿಗಳಿಗೆ ತಿಳಿಸುತ್ತಾ, ಆಕ್ಷೇಪಣೆ ಸಲ್ಲಿಸುವುದು ಪ್ರತಿಯೊಬ್ಬರ ಹಕ್ಕಾಗಿದ್ದು, ಅದರೊಂದಿಗೆ ಜವಾಬ್ದಾರಿಯೂ ಇದೆ. ಸಗಟಾಗಿ (ಬಲ್ಕ್) ಆಕ್ಷೇಪಣೆ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿಲ್ಲ. ಪ್ರತಿಯೊಂದು ಆಕ್ಷೇಪಣೆಗೆ ಪ್ರತ್ಯೇಕ ಅರ್ಜಿಯನ್ನು ಸಲ್ಲಿಸುವುದು ಕಡ್ಡಾಯವಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

ಪ್ರಸ್ತುತ ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ-ಮನೆಗೆ ತೆರಳಿ ಸಂಬಂಧಿಸಿದ ಮತದಾರರಿಗೆ ನೋಟಿಸ್‌ಗಳನ್ನು ನೀಡುತ್ತಿದ್ದಾರೆ. ನೋಟಿಸ್‌ನಲ್ಲಿ ವಿಚಾರಣೆಗೆ ಹಾಜರಾಗಬೇಕಾದ ದಿನಾಂಕ, ಸ್ಥಳ ಹಾಗೂ ಸಮಯವನ್ನು ನಮೂದಿಸಲಾಗಿರುತ್ತದೆ. ನೋಟಿಸ್‌ನಲ್ಲಿ ಕ್ಯೂಆರ್ ಕೋಡ್ ಸಹ ನೀಡಲಾಗಿದ್ದು, ವಿಚಾರಣೆಗೆ ಹಾಜರಾಗುವ ಸಂದರ್ಭದಲ್ಲಿ ಜತೆಗೆ ತರಬೇಕಾದ ಅಗತ್ಯ ದಾಖಲೆಗಳ ಕುರಿತು ಸಂಪೂರ್ಣ ಮಾಹಿತಿಯನ್ನು ಅದರ ಮೂಲಕ ಪಡೆಯಬಹುದಾಗಿದೆ ಎಂದು ತಿಳಿಸಿದರು.

ನೋಟಿಸ್ ಪಡೆದ ಮತದಾರರು ನಿಗದಿತ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಅಗತ್ಯ ದಾಖಲೆಗಳೊಂದಿಗೆ ಹಾಜರಾಗಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವಂತೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ತಮ್ಮ ವ್ಯಾಪ್ತಿಯಲ್ಲಿ ಮತದಾರರಿಗೆ ಮಾಹಿತಿ ನೀಡಿ ಪ್ರೇರೇಪಿಸಬೇಕು. ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಅಗತ್ಯ ಕ್ರಮ ವಹಿಸಬೇಕು. ಮತದಾನ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಸ್ವೀಪ್ ಸಮಿತಿಯಿಂದಲೂ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಸಭೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಚುನಾವಣಾ ವಿಭಾಗದ ತಹಶೀಲ್ದಾರ್ ಪ್ರೇಮಸಿಂಗ್ ಪವಾರ್, ಚುನಾವಣಾ ವಿಭಾಗದ ಸಚ್ಚಿದಾನಂದ ತೇರದಾಳ ಸೇರಿದಂತೆ ಚುನಾವಣಾ ವಿಭಾಗದ ಅಧಿಕಾರಿಗಳು ಉಪಸ್ಥಿತರಿದ್ದರು.

### ಪ್ರತಿಯೊಬ್ಬರೂ ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಿಸಲು ಜಿಲ್ಲಾಧಿಕಾರಿ ಡಾ. ಆನಂದ. ಕೆ. ಸಾರ್ವಜನಿಕರಿಗೆ ಮನವಿ

# ಶಾಂತಿ– ಸೌಹಾರ್ದಯುತವಾಗಿ ಗಣೇಶ ಹಬ್ಬ ಆಚರಿಸಿ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಜಿಲ್ಲಾಡಳಿತ ನೀಡುವ ಅಗತ್ಯ ಸೂಚನೆಗಳನ್ನು ಪಾಲಿಸುವುದರೊಂದಿಗೆ ಗಣೇಶ ಚತುರ್ಥಿಯನ್ನು ಅರ್ಥಪೂರ್ಣ ಹಾಗೂ ಶಾಂತಿ–ಸೌಹಾರ್ದಯುತವಾಗಿ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ.ಕೆ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಗುರುವಾರ ಗಣೇಶ ಹಬ್ಬ ಹಬ್ಬದ ಆಚರಣೆ ಕುರಿತ ಶಾಂತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಹಬ್ಬದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ ಸಂಭ್ರಮದಿಂದ ಆಚರಿಸುವಂತೆ ವಿವಿಧ ಸಮಿತಿ ಮತ್ತು ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರಿಗೆ ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಈಗಾಗಲೇ ನಾಲ್ಕೈದು ಸಲ ಶಾಂತಿ ಸಭೆ ಮಾಡಲಾಗಿದೆ. ಗಣೇಶ ವಿಸರ್ಜನೆಗೆ ನಾಲ್ಕು ಎಕರೆ ಜಾಗದಲ್ಲಿ ದರ್ಗಾ ಜೈಲು ಬಳಿ ಕೃತಕ ಹೊಂಡ ನಿರ್ಮಾಣ ಮಾಡಲಾಗಿದೆ. ಇನ್ನೊಂದೆಡೆ ನಗರದ ಬಹುತೇಕ ಗಜಾನನ ಮಂಡಳಿಗಳು, ಪಿಒಪಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಬಳಕೆ ಮಾಡದೇ ಪರಿಸರ ಸ್ನೇಹಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಮಾಡುತ್ತಿರುವುದನ್ನು ಪ್ರಶಂಸಿಸಿದ ಜಿಲ್ಲಾಧಿಕಾರಿಗಳು, ಪರಿಸರ ಸ್ನೇಹಿ ಹಬ್ಬ ಆಚರಿಸಲು ಸಲಹೆ ಮಾಡಿದರು.

ಡಿಜೆ ಹಾಗೂ ವಿದ್ಯುತ್ ಅವಘಡದಿಂದ ಯಾವುದೇ ಘಟನೆಗಳಾಗದಂತೆ ನೋಡಿಕೊಳ್ಳಲು ಸ್ವಯಂ ಸೇವಕರನ್ನು ನೇಮಕ ಮಾಡಿಕೊಳ್ಳಬೇಕು. ಗಜಾನನ ಮಂಡಳಿಯವರು ಸಾಂಸ್ಕೃತಿಕ ಮೆರಗು ಹೆಚ್ಚಿಸುವ ಕಲಾ ಪ್ರಕಾರಗಳನ್ನು ಹೆಚ್ಚಿಸಿಕೊಳ್ಳಲಿ. ಆದರೆ ಡಿಜೆ ಬಳಕೆ ಬಗ್ಗೆ ಕಟ್ಟೆಚ್ಚರ ವಹಿಸಬೇಕು ಎಂದರು. ದರ್ಗಾ ಸ್ಥಳದಲ್ಲಿ ಒಂದೇ ಬಾರಿಗೆ ಎರಡು ಗಣೇಶ ಮೂರ್ತಿ ವಿಸರ್ಜನೆ ಮಾಡಲು ಅವಕಾಶವಿದೆ. ಅದನ್ನು ಗಜಾನನ ಮಂಡಳಿಯವರು ಸದ್ಬಳಕೆ ಮಾಡಿಕೊಳ್ಳಬೇಕು. ಯಾವುದೇ ಧಾರ್ಮಿಕ ಕಾರ್ಯಕ್ರಮಗಳನ್ನು ಸುಸೂತ್ರವಾಗಿ ನಡೆಸಲು ಜಿಲ್ಲಾಡಳಿತದ ಸಂಪೂರ್ಣ ಸಹಕಾರವಿದೆ. ಹಾಗಾಗಿ ಜಿಲ್ಲಾಡಳಿತದೊಂದಿಗೆ ಸಹಕರಿಸಬೇಕು. ಯಾವುದೇ ಸಮಸ್ಯೆ ಇಲ್ಲದೇ ಗಣೇಶ ಹಬ್ಬವನ್ನು ಶಾಂತಿ, ಸೌಹಾರ್ದತೆಯಿಂದ ಹಾಗೂ ವಿಜೃಂಭಣೆಯಿಂದ ಆಚರಿಸೋಣ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಮಾತನಾಡಿ, ಜಿಲ್ಲಾಡಳಿತದಿಂದ ಸಾರ್ವಜನಿಕರಿಗೆ ಯಾವುದೇ ರೀತಿಯ ಸಮಸ್ಯೆ ಆಗಬಾರದು. ಸಾರ್ವಜನಿಕ ಹಬ್ಬಗಳಿಗೆ ಜಿಲ್ಲಾಡಳಿತದಿಂದ ಸಹಾಯ ಸಹಕಾರ ಹಾಗೂ ತಮ್ಮಿಂದ ಸಹಾಯ ಸಹಕಾರ ಕೋರುತ್ತೇವೆ ಎಂದರು. ವಿದ್ಯುತ್ ಸಮಸ್ಯೆಗಳಿದ್ದ ಸಂದರ್ಭದಲ್ಲಿ ಹೆಸ್ಕಾಂ ಇಲಾಖೆಯ ಸಿಬ್ಬಂದಿ ರೂಟ್ ಪ್ರಕಾರ ಭದ್ರತೆಯನ್ನು ಕೈಗೊಳ್ಳುವಂತೆ ತಿಳಿಸಿದ ಅವರು, ಗಣೇಶ ಮೂರ್ತಿ ಎತ್ತರವನ್ನು ಗಜಾನನ ಮಂಡಳಿಗಳು ಗಮನಿಸಬೇಕು ಎಂದು ಸೂಚಿಸಲಾಗಿದೆ ಎಂದರು.

ರಾತ್ರಿ 10 ಗಂಟೆ ನಂತರ ಗಜಾನನ ಮಂಡಳಿಗಳು ಧ್ವನಿವರ್ಧಕಗಳನ್ನು ಬಳಕೆ ಸೇರಿದಂತೆ ಒಟ್ಟಾರೆ ಸಾರ್ವಜನಿಕರಿಗೆ, ಹಿರಿಯ ನಾಗರಿಕರಿಗೆ, ಶಾಲಾ ಮಕ್ಕಳಿಗೆ ಹಾಗೂ ಆಸ್ಪತ್ರೆಯಲ್ಲಿರುವ ರೋಗಿಗಳಿಗೆ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದರು.

ಫ್ಲೆಕ್ಸ್ ಹಾಗೂ ಬ್ಯಾನರ್ ಯಾರಿಗೂ ತೊಂದರೆಯಾಗದಂತೆ ಅಳವಡಿಸಬೇಕು. ಸ್ವಯಂ ಸೇವಕರನ್ನು ಬಂದೊಬಸ್ತಿಗೆ ನಿಯೋಜಿಸಿ ಆ ಮೂಲಕ ಶಿಸ್ತುಬದ್ಧವಾಗಿ ಹಾಗೂ ಶಾಂತಿಯಿಂದ ಮೆರವಣಿಗೆ ನಡೆಯಲು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.

ಸಾಮಾಜಿಕ ಜಾಲ ತಾಣದಲ್ಲಿ ಬರುವ ಯಾವುದೇ ಸಂದೇಶಗಳನ್ನು ಪರಾಮರ್ಶಿಸಿ ಪರಿಶೀಲಿಸಿ, ಅಂತಹ ಸಂದೇಶಗಳಿದ್ದರೆ ಪೊಲೀಸ್ ಇಲಾಖೆಯ ಗಮನಕ್ಕೆ ತರಬೇಕು. ಈ ಕುರಿತು ನಿಗಾವಹಿಸಿ ಸೌಹಾರ್ದತೆ ಹಾಗೂ ಶಾಂತಿ ಕಾಪಾಡಬೇಕು. ಪರಸ್ಪರ ಸಹಾಯ ಹಾಗೂ ಸಹಕಾರದಡಿ ಸುಸೂತ್ರವಾಗಿ ಗಣೇಶ ಹಬ್ಬ ಆಚರಿಸಬೇಕು ಎಂದರು.

ತಾಜಬಾವಡಿಯಲ್ಲಿ ಹೈದ್ರಾಬಾದ್ ಮೂಲದ ಟಿಸಿಎಸ್ ಕಂಪನಿ ಅಭಿವೃದ್ಧಿ ಕಾಮಗಾರಿ ಆರಂಭಿಸಿದೆ. ಕಾಮಗಾರಿ ನಡೆದಿರುವುದರಿಂದ ಎಲ್ಲ ಗಣಪತಿ ಮಂಡಳಿಯವರ ಜೊತೆಗೆ ಅಲ್ಲಿನ ಸ್ಥಳ ಪರಿಶೀಲನೆ ಮಾಡಲಾಗಿದೆ. ಜಿಲ್ಲಾಡಳಿತ ಎರಡು ಅಡಿಯ ಗಣೇಶ ಮೂರ್ತಿಗಳನ್ನು ತಾಜಬಾವಡಿಯಲ್ಲಿ ವಿಸರ್ಜನೆಗೆ ಅನುಕೂಲ ಕಲ್ಪಿಸಿದೆ ಎಂದರು.

ಜಾಸ್ತಿ ಎತ್ತರದ ಗಣೇಶ ಮೂರ್ತಿಗಳನ್ನು ಮಹಾನಗರ ಪಾಲಿಕೆಯು ನಗರದ ದರ್ಗಾ ಕಾರಾಗೃಹ ಬಳಿ ಗಣೇಶ ಮೂರ್ತಿ ಕೃತಕ ಹೊಂಡ ಸಿದ್ಧಪಡಿಸಿ ಗಣೇಶ ಮೂರ್ತಿ ವಿಸರ್ಜನೆಗೆ ಅವಕಾಶ ಕಲ್ಪಿಸಲಾಗುವುದು ಎಂದರು. ಹೆಸ್ಕಾಂ ಅಧೀಕ್ಷಕ ಅಭಿಯಂತರರಾದ ಸಿದ್ದಪ್ಪ ಬಿಂಜಗೇರಿ ಮಾತನಾಡಿ, ಎಲ್ಲ ಗಜಾನನ ಮಂಡಳಿಯವರು ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಆಗದಂತೆ ಸುರಕ್ಷತಾ ಕ್ರಮ ಅನುಸರಿಸಬೇಕು. ಇದಕ್ಕೆ ಸಂಬಂಧಿಸಿದಂತೆ ಆರ್ ಸಿಸಿಬಿ ಅಳವಡಿಸಿ ವಿದ್ಯುತ್ ಅವಘಡ ತಪ್ಪಿಸಬಹುದಾಗಿದೆ ಎಂದು ಸಲಹೆ ನೀಡಿದರು.

ಪ್ರತಿ ಗಣೇಶ ಮಂಟಪಗಳಲ್ಲಿ ಈ ಆರ್.ಸಿ.ಸಿ.ಬಿ ಉಪಕರಣ ಅಳವಡಿಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಈ ಸುರಕ್ಷತಾ ಸಾಧನವನ್ನು ಬಳಸುವುದರಿಂದ ಆಗಬಹುದಾದ ದೊಡ್ಡ ಮಟ್ಟದ ಅಪಾಯ ಹಾಗೂ ಅನಾಹುತಗಳನ್ನು ತಪ್ಪಿಸಬಹುದಾಗಿದೆ ಎಂದು ಅವರು ತಿಳಿಸಿದರು.


ತಾತ್ಕಾಲಿಕ ವಿದ್ಯುತ್ ಜೋಡಣೆಗೆ ನುರಿತ ಎಲೆಕ್ಟ್ರಿಷಿಯನ್ ಅವರಿಂದ ವೈರಿಂಗ್ ಮಾಡಿಸಬೇಕು. ತೆರೆದ ವಿದ್ಯುತ್ ತಂತಿಗಳು ಅಥವಾ ದುರ್ಬಲ ವೈಯರ್‌ಗಳನ್ನು ಬಳಸಬಾರದು ಹಾಗೂ ನೀರು ಬೀಳುವ ಸ್ಥಳಗಳಿಂದ ವಿದ್ಯುತ್ ಬಳಕೆ ಸಾಧನ ದೂರವಿಡಬೇಕು. ಆ ಮೂಲಕ ಹಬ್ಬದ ಸಂಭ್ರಮದಲ್ಲಿ ಯಾವುದೇ ರೀತಿಯ ವಿದ್ಯುತ್ ಅವಘಡಗಳಿಗೆ ಆಸ್ಪದ ನೀಡದೆ, ಸುರಕ್ಷತಾ ನಿಯಮಗಳನ್ನು ಪ್ರತಿ ಮಂಡಳಿಯವರು ತಪ್ಪದೇ ಪಾಲಿಸಿ ಸುರಕ್ಷಿತವಾಗಿ ಗಣೇಶೋತ್ಸವ ಆಚರಿಸಬೇಕೆಂದು ಅವರು ಸಲಹೆ ನೀಡಿದರು.

ವಿವಿಧ ಗಜಾನನ ಮಂಡಳಿಯ ಅಧ್ಯಕ್ಷರು ಪದಾಧಿಕಾರಿಗಳು ತಮ್ಮ ಸಲಹೆ ಸೂಚನೆ ನೀಡಿದರು.

ಸಭೆಯಲ್ಲಿ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ, ವಿಜಯಪುರ ಉಪವಿಭಾಗಾಧಿಕಾರಿ ಜುಫಿಶಾನ್ ಹಕ್, ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಸೇರಿದಂತೆ ವಿಜಯಪುರ ಜಿಲ್ಲಾ ವಿವಿಧ ಗಜಾನನ ಮಂಡಳಿಗಳ ಅಧ್ಯಕ್ಷರು, ಪದಾಧಿಕಾರಿಗಳು, ವಿವಿಧ ಸಂಘಟನೆಗಳ ಮುಖಂಡರು ಪಾಲ್ಗೊಂಡಿದ್ದರು.

## ಆಲಮಟ್ಟಿ ಜಲಾಶಯಕ್ಕೆ ವಿದ್ಯುತ್ ದೀಪಾಲಂಕಾರ

■ ಉದಯರಶ್ಮಿ ದಿನಪತ್ರಿಕೆ



ಆಲಮಟ್ಟಿ: ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸಿ 100 ದಿನ ಪೂರೈಸಿದ ಹಿನ್ನೆಲೆಯಲ್ಲಿ ಸರ್ಕಾರದ ನಿರ್ದೇಶನದ ಮೇರೆಗೆ ಆಲಮಟ್ಟಿ ಜಲಾಶಯಕ್ಕೆ ವರ್ಣಮಯ ವಿದ್ಯುತ್ ದೀಪಾಲಂಕಾರ ಮಾಡಲಾಗಿತ್ತು. ಗುರುವಾರ ಸಂಜೆ ವಿದ್ಯುತ್ ದೀಪಗಳ ಅಲಂಕಾರದಲ್ಲಿ ಆಲಮಟ್ಟಿ ಜಲಾಶಯ ವರ್ಣರಂಜಿತವಾಗಿ ಕಂಗೊಳಿಸಿತು. ಈ ವಿಶೇಷ ದೀಪಾ ಲಂಕಾರವು ಸೆಪ್ಟೆಂಬರ್ 10 ಮತ್ತು 11, ಎರಡು ದಿನಗಳ ಕಾಲ ಇರಲಿದೆ ಎಂದು ಜಲಾಶಯದ ಅಧಿಕಾರಿಗಳು ತಿಳಿಸಿದ್ದಾರೆ.



## ಸಮಸ್ಯೆಗೆ ಸಾವು ಪರಿಹಾರವಲ್ಲ, ತಾಳ್ಮೆಯಿಂದ ಎದುರಿಸಬೇಕು

ಕಲಬುರಗಿ : ಸಾಲ, ವೈಯಕ್ತಿಕ ಕಾರಣಗಳು, ಪ್ರೇಮ ವೈಫಲ್ಯ, ಪರೀಕ್ಷೆಗಳಲ್ಲಿ ಅನುತ್ತೀರ್ಣ, ಕೌಟುಂಬಿಕ ಕಲಹ, ಖಿನ್ನತೆ ಸೇರಿದಂತೆ ಮತ್ತಿತರ ಕಾರಣಗಳಿಂದ ಜೀವನದಲ್ಲಿ ಜಿಗುಪ್ಸೆಗೊಂಡು ಆತ್ಮಹತ್ಯೆ ಜರುಗುತ್ತಿವೆ. ಸಮಸ್ಯೆಗೆ ಸಾವು ಪರಿಹಾರವಲ್ಲ. ತಾಳ್ಮೆಯಿಂದ ಸಮಸ್ಯೆಯನ್ನು ಎದುರಿಸಬೇಕು ಎಂದು ಉಪನ್ಯಾಸಕ, ಸಮಾಜ ಸೇವಕ ಎಚ್.ಬಿ.ಪಾಟೀಲ್ ಹೇಳಿದರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪವಿರುವ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಬುಧವಾರ ಏರ್ಪಡಿಸಿದ್ದ "ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆ" ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ವಿಶೇಷವಾಗಿ ಮಹಿಳೆಯರು, ರೈತರು ಮತ್ತು ವಿದ್ಯಾರ್ಥಿ ಸಮೂಹ ಆತ್ಮಹತ್ಯೆ ದಾರಿ ತುಳಿಯುತ್ತಿದ್ದಾರೆ. ಜೀವನದಲ್ಲಿ ಬರುವ ಯಾವುದೇ ಸಮಸ್ಯೆಯನ್ನು ಧೈರ್ಯದಿಂದ ಎದುರಿಸಬೇಕು. ಯಾವುದೇ ಕಾರಣಕ್ಕೂ ಆತ್ಮಹತ್ಯೆ ಮಾಡಿಕೊಳ್ಳಬಾರದು. ಆಪ್ತ ಸಮಾಲೋಚನೆ, ಸತ್ಸಂಗ, ಧನಾತ್ಮಕ ಚಿಂತನೆ, ಯೋಗ, ಧ್ಯಾನ ಮಾಡಬೇಕು. ಇರುವುದರಲ್ಲಿಯೇ ತೃಪ್ತಿಯಿಂದ ಇರುವುದು ಕಲಿಯಬೇಕು ಎಂದು ಮಾರ್ಮಿಕವಾಗಿ ನುಡಿದರು. ವಿಶ್ವದಲ್ಲಿ ಪ್ರತಿವರ್ಷ 10 ಲಕ್ಷ ಜನರು ಮತ್ತು ನಮ್ಮ ದೇಶದಲ್ಲಿ ಪ್ರತಿ 4 ನಿಮಿಷಗಳಿಗೊಬ್ಬರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಆತ್ಮಹತ್ಯೆ ಪ್ರಕರಣದಲ್ಲಿ ಕರ್ನಾಟಕ ನಾಲ್ಕನೇ ಸ್ಥಾನದಲ್ಲಿದೆ. ಮಕ್ಕಳಿಗೆ ಒತ್ತಡ ಹಾಕುವುದು ಬೇಡ ಎಂದರು. ಕಾರ್ಯಕ್ರಮದಲ್ಲಿ ದತ್ತು ಹಡಪದ, ಶಿವಯೋಗೆಪ್ಪಾ ಎಸ್. ಬಿರಾದಾರ, ಡಾ.ರಾಜಶೇಖರ ಪಾಟೀಲ್ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಗಣಪತಿ ಹಬ್ಬದ ಹಿನ್ನೆಲೆ ಕರಜಗಿಯಲ್ಲಿ ಶಾಂತಿ ಸಭೆಕಾನೂನು ಪಾಲನೆಗೆ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಸೂಚನೆ

ಕರಜಗಿ: ಗಣಪತಿ ಹಬ್ಬದ ಹಿನ್ನೆಲೆಯಲ್ಲಿ ಅಫಜಲಪುರ ತಾಲೂಕಿನ ಕರಜಗಿ ಗ್ರಾಮದ ಶ್ರೀ ಯಲ್ಲಾಲಿಂಗೇಶ್ವರ ಮಠದ ಆವರಣದಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ಶಾಂತಿ ಸಭೆ ನಡೆಯಿತು.

ಸಭೆಯಲ್ಲಿ ಪಿಎಸ್ಐ ಶ್ರೀಶೈಲ ಅಂಬಾಟೆ ಮಾತನಾಡಿ, ಗಣಪತಿ ಹಬ್ಬದ ಸಂದರ್ಭದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದರು. ಗಣಪತಿ ಪ್ರತಿಷ್ಠಾಪನೆ ಹಾಗೂ ಇತರೆ ಕಾರ್ಯಕ್ರಮಗಳನ್ನು ಆಯೋಜಿಸುವ ಮೊದಲು ಜೆಸ್ಕಾಂ ಇಲಾಖೆಯ ಅನುಮತಿ ಮತ್ತು ಪೊಲೀಸ್ ಠಾಣೆಯ ಅನುಮತಿಯನ್ನು ಕಡ್ಡಾಯವಾಗಿ ಪಡೆಯಬೇಕು ಎಂದು ತಿಳಿಸಿದರು.

ಮಸೀದಿ ಸೇರಿದಂತೆ ಧಾರ್ಮಿಕ ಸ್ಥಳಗಳ ಮುಂಭಾಗದಲ್ಲಿ ಧ್ವನಿವರ್ಧಕದ ಶಬ್ದವನ್ನು ಕಡಿಮೆ ಮಾಡಬೇಕು. ಯಾವುದೇ ಗಲಾಟೆ ಅಥವಾ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ, ಎಲ್ಲ ಧರ್ಮಗಳ ಭಾವನೆಗಳನ್ನು ಗೌರವಿಸಿ ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಭಾವೈಕ್ಯತೆಯಿಂದ ಆಚರಿಸಬೇಕು ಎಂದು ಹೇಳಿದರು.ಗ್ರಾಮದಲ್ಲಿ ಶಾಂತಿ ಕದಡುವ ರೀತಿಯಲ್ಲಿ ಗಲಾಟೆ ಮಾಡುವವರು ಅಥವಾ ಕಾನೂನು ಉಲ್ಲಂಘಿಸುವವರ ವಿರುದ್ಧ ಯಾವುದೇ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪಿಎಸ್ಐ ಶ್ರೀಶೈಲ ಅಂಬಾಟೆ ಖಡಕ್ ಎಚ್ಚರಿಕೆ ನೀಡಿದರು.ಸಭೆಯಲ್ಲಿ ಹಿಂದೂ–ಮುಸ್ಲಿಂ ಸಮುದಾಯದ ಹಿರಿಯರು ಮಾತನಾಡಿ, "ನಾವೆಲ್ಲರೂ ಒಂದೇ. ಗ್ರಾಮದ ಶಾಂತಿ ಮತ್ತು ಸೌಹಾರ್ದತೆ ಕಾಪಾಡಲು ಪೊಲೀಸ್ ಇಲಾಖೆಯೊಂದಿಗೆ ಸಂಪೂರ್ಣ ಸಹಕಾರ ನೀಡುತ್ತೇವೆ" ಎಂದು ಭರವಸೆ ನೀಡಿದರು.

ಗಣಪತಿ ಹಬ್ಬವನ್ನು ಪರಸ್ಪರ ಗೌರವ, ಶಾಂತಿ, ಸೌಹಾರ್ದತೆ ಹಾಗೂ ಭಾವೈಕ್ಯತೆಯಿಂದ ಆಚರಿಸುವಂತೆ ಸಭೆಯಲ್ಲಿ ಕರೆ ನೀಡಲಾಯಿತು.

ಈ ಸಂದರ್ಭದಲ್ಲಿ ಮಾಶಾಳ ಉಕ್ಕಡ ಪೊಲೀಸ್ ಠಾಣೆಯ ಎಸ್ಐ ಬಸವರಾಜ ಪೂಜಾರಿ, ಇಮಾಮ್ ಬಾಗ್ವಾನ್, ಪೊಲೀಸ್ ಸಿಬ್ಬಂದಿ ಹಾಗೂ ಗ್ರಾಮದ ಮುಖಂಡರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

## ವಚನಗಳಲ್ಲಿರುವ ತತ್ವಗಳನ್ನು ಅಳವಡಿಸಿಕೊಳ್ಳಿ :ಹಿರೇಮಠ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಸನಾತನ ಧರ್ಮದ ಪವಿತ್ರ ಶ್ರಾವಣ ಮಾಸದಲ್ಲಿ ಪುರಾಣ–ಪ್ರವಚನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವದು ಆ ಭಾಗದ ಜನತೆಯಲ್ಲಿ ಸತ್ಯ, ಧರ್ಮ, ಮಾನವೀಯತೆ, ಸಹಬಾಳ್ವೆ ಮತ್ತು ಸದಾಚಾರದ ಮೌಲ್ಯಗಳನ್ನು ಬೆಳೆಸುವದಕ್ಕಾಗಿ ಎಂದು ಮಿಣಜಗಿ ಗ್ರಾಮದ ಗುರುಪಾದೇಶ್ವರ ಮಠದ ಆಡಳಿತಾಧಿಕಾರಿಗಳು ಹಾಗೂ ಪ್ರವಚನಕಾರರಾದ ಪ್ರೊ.ಡಾ.ಸೋಮಶೇಖರ ಹಿರೇಮಠ ಹೇಳಿದರು.

ಮಿಣಜಗಿ ಗ್ರಾಮದ ಮಾಯಮ್ಮ ದೇವಿ ದೇವಸ್ಥಾನದಲ್ಲಿ ಶ್ರಾವಣ ಮಾಸದ ನಿಮಿತ್ಯ ಹಮ್ಮಿಕೊಳ್ಳಲಾಗಿದ್ದ ಶಿವಶರಣೆ ಅಕ್ಕಮಹಾದೇವಿಯವರ ಪ್ರವಚನ ಕಾರ್ಯಕ್ರಮದಲ್ಲಿ ಅವರು ಪ್ರವಚನ ನೀಡಿದರು. ಅಕ್ಕಮಹಾದೇವಿಯವರ ವಚನಗಳು ಕೇವಲ ಆಧ್ಯಾತ್ಮಿಕ ವಿಚಾರಗಳಲ್ಲ. ಅವು ಮನುಷ್ಯನ ಬದುಕಿಗೆ ಸತ್ಯ, ನಿಷ್ಠೆ, ವೈರಾಗ್ಯ ಹಾಗೂ ಆತ್ಮಶುದ್ಧಿಯ ಮಾರ್ಗವನ್ನು ತೋರಿಸುವ ಜೀವನ ಸಂದೇಶಗಳಾಗಿವೆ. ಅಕ್ಕಮಹಾದೇವಿಯವರು ತಮ್ಮ ಬದುಕಿನ ಮೂಲಕ ಮಹಿಳಾ ಸ್ವಾತಂತ್ರ, ಆತ್ಮಗೌರವ ಮತ್ತು ಭಕ್ತಿಯ ಮಹತ್ವವನ್ನು ಸಾರಿದ್ದಾರೆ. ಅವರ ವಚನಗಳಲ್ಲಿರುವ ತತ್ವಗಳನ್ನು ಇಂದಿನ ಯುವಜನತೆ ಅರ್ಥೈಸಿಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಸಾನಿಧ್ಯ ವಹಿಸಿದ್ದ ವಡವಡಗಿಯ ಭೃಂಗೇಶ್ವರ ಶಿವಾಚಾರ್ಯರು ಮಾತನಾಡಿ, ಪುರಾಣ–ಪ್ರವಚನಗಳಂತಹ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ನಮ್ಮ ಹಿರಿಯರು ಬೆಳೆಸಿಕೊಂಡು ಬಂದಿರುವ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೂ ಪರಿಚಯಿಸುವ ಕಾರ್ಯವಾಗುತ್ತಿರೋದು ಶ್ಲಾಘನೀಯ. ಇಂತಹ ಕಾರ್ಯಕ್ರಮಗಳು ಕೇವಲ ಧಾರ್ಮಿಕ ಆಚರಣೆಗಳಿಗೆ ಸೀಮಿತವಾಗದೆ ಅವು ನಮ್ಮ ಬದುಕನ್ನು ಬದಲಿಸುವ ಜೀವನದರ್ಶನಗಳಾಗಬೇಕು. ಸತ್ಯವನ್ನು ಪಾಲಿಸುವುದು, ಧರ್ಮದ ಹಾದಿಯಲ್ಲಿ ನಡೆಯುವುದು, ಹಿರಿಯರನ್ನು ಗೌರವಿಸುವುದು, ದುರ್ಬಲರಿಗೆ ನೆರವಾಗುವುದು, ಪರಸ್ಪರ ಪ್ರೀತಿ–ಸೌಹಾರ್ದದಿಂದ ಬದುಕುವುದು ಹಾಗೂ ಸಮಾಜದಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯವಾಗಬೇಕು ಎಂದರು.

ಎಲ್ಲ ಮಾತೆಯರು ತಮ್ಮ ಇಷ್ಟಾರ್ಥಸಿದ್ಧಿಗಾಗಿ ಇಷ್ಟಲಿಂಗ ಪೂಜೆ ಮಾಡಿಕೊಂಡರು. ಮಹದೇವಿ ಬಿರಾದಾರ, ಬಸ್ಸಮ್ಮ ಬಿರಾದಾರ, ಚೆನ್ನಮ್ಮ ವಾಲಿ, ಪದ್ಮಾವತಿ ಬಿರಾದಾರ, ಬಸಮ್ಮ ತೆಕ್ಕೂರ್, ಜೆ.ಡಿ.ಪಾಟೀಲ, ಡಿ.ಕೆ.ಪಾಟೀಲ, ಸಂಗನಗೌಡ ಪಾಟೀಲ, ಮಲ್ಲನಗೌಡ ಬಿರಾದಾರ, ಮಹಾಂತೇಶ ಬಿರಾದಾರ, ಈರಯ್ಯ ಹಿರೇಮಠ, ಸಾಬಣ್ಣ ಅಗ್ನಿ, ಎಂ.ಜಿ.ಯರನಾಳ, ಎಮ್ ಸರ್ಜಾಪುರ್ ಸೇರಿದಂತೆ ಸಾಕಷ್ಟು ಜನ ಭಾಗಿಯಾಗಿ ಪ್ರವಚನ ಆಲಿಸಿದರು. ಸಂಗೀತಗಾರರಾದ ಮಹಾಂತೇಶ ಬಿರಾದಾರ, ತಬಲಾವಾದಕರಾದ ಆಕಾಶ್ ಹಿರೇಮಠರು ಪ್ರವಚನಕಾರರಿಗೆ ಸಾಥ್ ನೀಡಿದರು.

## ಪರೀಕ್ಷೆಯ ರಕ್ಷೆ



### ನಾವು - ನಮ್ಮವರು
(ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಕುರಿತು ಲೇಖನ ಮಾಲಿಕೆ)

■ ಉದಯರಶ್ಮಿ ದಿನಪತ್ರಿಕೆ

ಓರ್ವ ರೈತ ತನ್ನ ಹೊಲವನ್ನು ಉತ್ತು, ಹದ ಮಾಡಿ, ಬೀಜವನ್ನು ಬಿತ್ತಿ, ತಾನು ಮಾಡಿದ ಎಲ್ಲಾ ಕೆಲಸಗಳಿಗೆ ಪ್ರತಿಫಲವಾಗಿ ಒಳ್ಳೆಯ ಬೆಳೆಯ ನಿರೀಕ್ಷೆಯಲ್ಲಿ ತೊಡಗುತ್ತಾನೆ. ಆತನ ಪಾಲಿಗೆ ಬೀಜದಲ್ಲಿಯೇ ಬ್ರಹ್ಮಾಂಡವಿದೆ. ಅಂತೆಯೇ ಮಕ್ಕಳು ಕೂಡ ಬ್ರಹ್ಮಾಂಡ ಶಕ್ತಿಯ ಆಗರವಿದ್ದಂತೆ. ಮಕ್ಕಳ ಮೆದುಳು ಸಾಮಾಜಿಕ, ಧಾರ್ಮಿಕ ಮತ್ತು ಶೈಕ್ಷಣಿಕ ವಿಷಯಗಳ ಕುರಿತು ಎಲ್ಲವನ್ನು ಸಮಾನ ಆಸಕ್ತಿಯಿಂದ ಕಲಿತು ತನ್ನಲ್ಲಿ ಅಡಕಗೊಳಿಸಿಕೊಳ್ಳಬೇಕು. ಅಂತೆಯೇ ಪರೀಕ್ಷೆ ಎಂಬ ವಿಷಯ ಮಕ್ಕಳಿಗೆ ರಕ್ಷೆಯಾಗಿ ಭಾಸವಾಗಬೇಕು.

ಮಕ್ಕಳು ಪರೀಕ್ಷೆಯ ವಿಷಯದಲ್ಲಿ ಯಾವುದೇ ರೀತಿಯ ಆತಂಕವನ್ನು ಹೊಂದಿರದೆ ಆತ್ಮವಿಶ್ವಾಸದಿಂದ ಪರೀಕ್ಷೆಯನ್ನು ಎದುರಿಸಲು ಮನೆಯೇ ಮೊದಲ ರಕ್ಷೆಯಾಗಬೇಕು.

"ಮನೆಯ ಮೊದಲ ಪಾಠಶಾಲೆ ಜನನಿ ತಾನೇ ಮೊದಲ ಗುರುವು, ಜನನಿಯಿಂದ ಪಾಠ ಕಲಿತ ಜನರು ನಾವೇ ಧನ್ಯರು" ಎಂಬ ಮಾತಿನಂತೆ ತಾಯಿಯು ಮಗುವಿನಲ್ಲಿ ಧೈರ್ಯ, ಭರವಸೆ ಮತ್ತು ಆತ್ಮವಿಶ್ವಾಸಗಳನ್ನು ಉದ್ದೀಪಿಸಬಲ್ಲಳು.

ಪಾಲಕರಾಗಲಿ ಶಿಕ್ಷಕರಾಗಲಿ ಮಕ್ಕಳಿಗೆ ಕುಳಿತರೆ ನಿಂತರೆ ಊಟ ಮಾಡುತ್ತಿರಲಿ, ಆಟ ಆಡುತ್ತಿರಲಿ ಪದೇ ಪದೇ ಪರೀಕ್ಷೆಯ ವಿಷಯವನ್ನು ನೆನಪಿಸಿ ಭೀತಿಯನ್ನು ಹುಟ್ಟಿಸಬಾರದು. ಪರೀಕ್ಷೆ ಎಂಬುದು ಅವರ ಇದುವರೆಗಿನ ಕಲಿಕಾ ಸಾಮರ್ಥ್ಯವನ್ನು ಒರೆಗೆ ಹಚ್ಚುವ ಪ್ರಕ್ರಿಯೆ ಎಂಬಂತೆ ಮಕ್ಕಳಿಗೆ ಭಾಸವಾಗಬೇಕು. ಪರೀಕ್ಷೆಯ ಸಮಯದಲ್ಲಿ ನಿರಾಳ ಭಾವ ಮಕ್ಕಳಲ್ಲಿರಬೇಕು. ಇನ್ನೇನು ಪರೀಕ್ಷೆ ನಾಳೆಗೆ ಆರಂಭವಾಗುತ್ತದೆ ಎಂದರೆ ಮಕ್ಕಳು ಪರೀಕ್ಷೆಗೆ ಓದುವ ಕೆಲಸವನ್ನು ನಿಲ್ಲಿಸಿ ಆರಾಮದಾಯಕ ಮನಸ್ಥಿತಿಯನ್ನು ಹೊಂದಬೇಕು. ಪರೀಕ್ಷೆಗೆ ಬೇಕಾದ ಹಾಲ್ ಟಿಕೆಟ್, ಪೆನ್ನುಗಳು, ಜಾಮಿಟ್ರಿ ಬಾಕ್ಸ್ ಮುಂತಾದ ಪರಿಕರಗಳನ್ನು ಹಿಂದಿನ ದಿನ ಮಧ್ಯಾಹ್ನದ ನಂತರ ಹೊಂದಿಸಿಟ್ಟುಕೊಳ್ಳಬೇಕು. ಅತ್ಯಂತ ನಿರಾಳ ಭಾವದಿಂದ ಆಹಾರವನ್ನು ಸೇವಿಸಿ ಒಂದೊಳ್ಳೆಯ ಹರಟೆಯನ್ನು ಪಾಲಕರೊಂದಿಗೆ ಪೂರೈಸಿ ಬೇಗನೆ ನಿದ್ರಿಸಲು ಅನುವಾಗಬೇಕು. ಒಂದೊಳ್ಳೆಯ ನಿದ್ರೆ ಮಗುವಿನ ಮೆದುಳಿನಲ್ಲಿರುವ ನ್ಯೂರೋ ಟ್ರಾನ್ಸ ಮಿಟರ್ಗಳನ್ನು ಜಾಗೃತವಾಗಿಸಿ ಸಂಯೋಜಿಸಲ್ಪಡುತ್ತವೆ. ಮರುದಿನ ಮುಂಜಾನೆ ಸ್ವಸ್ಥ ಚಿತ್ತರಾಗಿ ಏಳುವ ಮಕ್ಕಳು ದೈನಂದಿನ ಕರ್ಮಗಳನ್ನು ಪೂರೈಸಿ ತಮ್ಮ ಆಯ್ಕೆಯ ತಿಂಡಿಯನ್ನು ಸೇವಿಸಿದಾಗ ಅವರಲ್ಲಿ ಸಂತೃಪ್ತಿ ಮನೆ ಮಾಡುತ್ತದೆ. ಇಂತಹ ಸಂತೃಪ್ತ ಮನಸ್ಥಿತಿಯಲ್ಲಿ ಮಕ್ಕಳು ಪರೀಕ್ಷೆಯ ಹಾಲ್ಗೆ ತೆರಳಿದಾಗ ಒಳ್ಳೆಯ ಮನಸ್ಥಿತಿಯು ಅವರಿಗೆ ಪರೀಕ್ಷೆಯನ್ನು ಎದುರಿಸಲು ಸಹಾಯ ಮಾಡುತ್ತದೆ. ಮಕ್ಕಳು ಪರೀಕ್ಷೆಯ ಸಮಯದಲ್ಲಿ ಇದುವರೆಗೂ ಮಾಡಿಕೊಂಡು ಬಂದಿರುವ ಕೆಲಸಗಳಿಂದ ಅವರಿಗೆ ವಿನಾಯಿತಿ ನೀಡಬೇಕು. ಒತ್ತಡ ರಹಿತರಾಗಿ ಮಕ್ಕಳು ಓದಿಕೊಳ್ಳಲು ಇದು ತುಸುಮಟ್ಟಿಗೆ ಒಳ್ಳೆಯದು. ಪರೀಕ್ಷೆಯ ಸಮಯದಲ್ಲಿ ಮಕ್ಕಳು ಆತಂಕ ರಹಿತರಾಗಿರುವುದು ಹೆಚ್ಚು ಲಾಭದಾಯಕ. ಪಾಲಕರೊಂದಿಗೆ ಮಾತನಾಡುತ್ತಾ, ಒಡನಾಡುತ್ತಾ ಮಕ್ಕಳು ತಮ್ಮ ಪರೀಕ್ಷಾ ಪರಿಕರಗಳನ್ನು ಹೊಂದಿಸಿಕೊಂಡು ಅಲ್ಲಿ ಹಾಲ್ ಟಿಕೆಟ್ ನಂಬರ್ ಎಂಟ್ರಿ ಮಾಡುವುದರಿಂದ ಹಿಡಿದು ಹೇಗೆ ಬರೆಯಬೇಕು ಎಂಬುದರ ಕುರಿತು ಸೂಕ್ಷ್ಮವಾಗಿ ಪಾಲಕರೊಂದಿಗೆ ಮಾತನಾಡುವುದು ಮರುದಿನದ ತಯಾರಿಗೆ ಒಳ್ಳೆಯ ಆರಂಭವನ್ನು ಕೊಡುತ್ತದೆ. ಪಾಲಕರ ವ್ಯಂಗ್ಯ ಮಾತುಗಳು ಮಗುವಿನಲ್ಲಿ ನಿರಾಶೆಯನ್ನು, ಹತಾಶೆಯನ್ನು ಮೂಡಿಸಬಹುದು ಯಾವಾಗಲೂ ಪಾಲಕರು ಮುಂದಿನ ಯೋಜನೆಯ ಕುರಿತು ಮಾತನಾಡಬೇಕು. ಮಕ್ಕಳ ವಿಚಾರಗಳನ್ನು ನಿಯಂತ್ರಿಸುವುದಲ್ಲ, ಪ್ರೋತ್ಸಾಹಿಸುವುದರ ಮೂಲಕ ಅವರಿಗೆ ಉತ್ತೇಜಿಸಬೇಕು.







ಲೇಖನ
– ವೀಣಾ ಹೇಮಂತ್ ಗೌಡ ಪಾಟೀಲ್.
ಮುಂಡರಗಿ
ಗದಗ ಜಿಲ್ಲೆ

# ಬೀದಿ ವ್ಯಾಪಾರಿಗಳ ಸಂಘದಿಂದ ಮೇಯರ್– ಉಪಮೇಯರ್ ಗೆ ಸನ್ಮಾನ



ಕಲಬುರಗಿ: ಅಖಿಲ ಕರ್ನಾಟಕ ಬೀದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಜಗನ್ನಾಥ ಎಸ್.ಸೂರ್ಯವಂಶಿ ನೇತೃತ್ವದ ನಿಯೋಗ ನೂತನ ಮೇಯರ್ ಅಜ್ಮಲ ಅಹ್ಮದ ಗೋಲಾ ಮತ್ತು ಉಪ ಮೇಯರ ಫರಹನಾ ಜಾಗಿರದಾರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾನೂನು ಬದ್ಧವಾಗಿ 2014–15 ರಲ್ಲಿ ಜಾ–ರಿಗೆ ತರಲಾದ ಬೀದಿಬದಿ ವ್ಯಾಪಾರಿಗಳ ಕಲ್ಯಾಣ ಯೋಜನೆಗಳನ್ನು ಸಮರ್ಪಕವಾಗಿ ಜಾ–ರಿಗೆ ತರಬೇಕು, ಇಲ್ಲಿನ ಬೀದಿ ವ್ಯಾಪರಸ್ಥರ ಸಮಸ್ಯೆಗಳನ್ನು ಆಲಿಸಿ ಅವುಗಳ ಪರಿಹಾರಕ್ಕೆ ತುರ್ತು ಮತ್ತು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂರ್ಯವಂಶಿ ಅವರು, ಮೇಯರ್ ಅವ–ರಿಗೆ ಮನವಿ ಮಾಡಿದರು. ಲೋಕೋಪಯೋಗಿ ಇಲಾಖೆಯಿಂದ ನಿರ್ಮಾಣಗೊಂಡಿರುವ 360 ಮಳಿಗೆಗಳನ್ನು ಬೀದಿಬದಿ ವ್ಯಾಪಾರಿಗಳಿಗೆ ಹಸ್ತಾಂತರಿಸಿದ್ದಲ್ಲಿ ಪಾಲಿಕೆಗೆ ಆದಾಯ ಬರುತ್ತಿತ್ತು ಎಂದ ಅವರು, ಮಹಾನಗರದಲ್ಲಿ ಈಗಾಗಲೇ ಗುರುತಿಸಲಾದ ಪ್ರತ್ಯೇಕ ಬೀದಿವ್ಯಾಪಾರಿಗಳ ಝುನಲ್ ಗಳ ಶಗಳಿಗೆ ಅಗತ್ಯ ಮೂಲ ಸೌಕರ್ಯ ಕಲ್ಪಿಸಿ, ಅಲ್ಲಿ ವ್ಯಾಪಾರ ವಹಿವಾಟು ಪ್ರಾರಂಭಿಸಲು ನೂತನ ಮೇಯರ್ ಅವರು, ಪ್ರಾಮಾಣಿಕ ಪ್ರಯತ್ನ ಮಾಡುತ್ತಾರೆ ಎಂಬ ವಿಶ್ವಾಸ ತಮಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಮೇಯರ್ ಅಜ್ಮಲ್ ಅಹ್ಮದ ಗೋಲಾ ಅವರು, ತಮ್ಮ ನ್ಯಾಯಸಮ್ಮತವಾದ ಬೀದಿವ್ಯಾಪಾರಿಗಳ ಸಂಘದ ಬೇಡಿಕೆಗಳನ್ನು ಪರಿಶೀಲಿಸಿ ಹಂತ ಹಂತವಾಗಿ ಕಾರ್ಯರೂಪಕ್ಕೆ ತರಲಾಗುವುದು ಎಂದ ಅವರು, ದೊಡ್ಡ ವ್ಯಾಪಾರಗಳಿಗಿಂತ ಸಣ್ಣಪುಟ್ಟ ವ್ಯಾಪಾರಿಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ವಹಿವಾಟು ನಡೆಯುತ್ತದೆ ಇದಕ್ಕೆ ಈ ವಲಯಕ್ಕೆ ಮತ್ತಷ್ಟು ಪ್ರೋತ್ಸಹ ನೀಡಿದ್ದಲ್ಲಿ ಪಾಲಿಕೆಗೂ ಆದಾಯದ ಲಭ್ಯವಾಗಲಿದೆ ಎಂದರು. ಹಿರಿಯ ನ್ಯಾಯವಾದಿ ಗುರುರಾಜ ತಿಳಗೊಳ ಮಾತನಾಡಿ, ನೂತನ ಮೇಯರ್ ಅಜ್ಮಲ್ ಅಹ್ಮದ ಗೋಲಾ ಅವರ ಮನೆತನ ಸಮಾಜ ಸೇವೆಯಲ್ಲಿ ತೊಡಗಿದ್ದು, ಶೋಷಿತರ ಮತ್ತು ಬಡ ಬೀದಿಬದಿ ವ್ಯಾಪಾರಸ್ಥರ ನೋವು ನಲಿವುಗಳಿಗೆ ಎಂದಿನಂತೆ ತಮ್ಮ ಸಹಾಯ ಸಹಕಾರ ಈ ಕುಟುಂಬ ನೀಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಬೀದಿ ವ್ಯಾಪಾರಿಗಳ ಸಂಘದ ಪ್ರಮುಖರಾದ ಸಾಹೇರ ಪಟೇಲ್, ಜಗತ್ ಸಿಂಗ್, ರಾಜವೀರ ಸಿಂಗ್, ಮಹಿಬೂಬ ದರ್ವೆಶ, ಬಸವರಾಜ, ಮಹೇಶ ಸೂರ್ಯವಂಶಿ, ಗೋಪಾಲ ಗಾಡಿಕೆ, ಗುಂಡು ಸದಾನಂದ, ಚನ್ನವೀರ, ಸುನಿತಾ ಗಾಡಕೆ, ಕಲಾವತಿ ಗಂಜಲ, ರುಕ್ಮೀಣಿ, ಜಗದೇವಿ ಫಾತಿಮಾ ಶೇಖ, ಶೈನಾಜ ಶಬಾನ, ಸದಾನಂದ ನಾಗಭುಜಂಗೆ, ಬಾಬು ಶೇಖ ಪರಿಟ್ ಸೇರಿದಂತೆ ಹಲವರಿದ್ದರು.

# ಶಿಕ್ಷಕರಿಗೆ ಬ್ರಹ್ಮಸ್ವರೂಪಿಯಾಗಿದ್ದ ಪೂಜ್ಯ ಡಾ.ಅಪ್ಪ

ಕಲಬುರಗಿ: ಶಿಕ್ಷಣ ಹರಿಕಾರ, ತತ್ವಜ್ಞಾನಿಯಾದ ಪೂಜ್ಯ ಡಾ.ಶರಣಬಸವಪ್ಪ ಅಪ್ಪ ಅವರು ಶಿಕ್ಷಕರ ಪಾಲಿಗೆ ಬ್ರಹ್ಮಸ್ವರೂಪಿಯಾಗಿದ್ದರು ಎಂದು ಶರಣಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ.ಸಾವಿತ್ರಿ ಬಿಳಗಿ ಅವರು ಹೇಳಿದರು.

ಅಖಿಲ ಭಾರತ ಶಿವಾನುಭವ ಮಂಟಪ ಶರಣಬಸವೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ 40 ದಿನಗಳ ಉಪನ್ಯಾಸ ಮಾಲಿಕೆಯಲ್ಲಿ ಬುಧವಾರ ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಎಂಬ ವಿಚಾರಕ್ಕೆ ಅವರು ಮಹತ್ವ ನೀಡಿದರು. ಶಿಕ್ಷಕರ ವೃತ್ತಿಪರ ಸಾಮರ್ಥ್ಯವನ್ನು ಹೆಚ್ಚಿಸಲು ಕಾರ್ಯಾಗಾರಗಳು, ತರಬೇತಿ ಕಾರ್ಯಕ್ರಮಗಳು, ವಿಚಾರ ಸಂಕಿರಣಗಳು ಮತ್ತು ಶೈಕ್ಷಣಿಕ ಚಟುವಟಿ–ಕೆಗಳು ಮಾಡಲು ಅವಕಾಶ ಮಾಡಿಕೊಟ್ಟರು. ಶಿಕ್ಷಕರಿಗೆ ಹೊಸ ಬೋಧನಾ ವಿಧಾನಗಳನ್ನು ತಿಳಿದುಕೊಳ್ಳಲು ಹಾಗೂ ಅವುಗಳನ್ನು ತರಗತಿಯಲ್ಲಿ ಅಳವಡಿಸಿಕೊಳ್ಳಲು ಸಲಹೆ ನೀಡುತ್ತಿದ್ದರು.

ಶಿಕ್ಷಕರು ಪಠ್ಯಪುಸ್ತಕದ ಜ್ಞಾನಕ್ಕೆ ಮಾತ್ರ

ಅವರು ಮತ್ತು ಶಿಕ್ಷಕರ ಬೆಳವಣಿಗೆ ವಿಷಯ ಕು–ರಿತು ಮಾತನಾಡಿ, ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರು ಕಲ್ಯಾಣ ಕರ್ನಾಟಕದ ಶೈಕ್ಷಣಿಕ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ ಶಿಕ್ಷಣ ಸಂತರು. ಅವರ ಶಿಕ್ಷಣದೃಷ್ಟಿಯಲ್ಲಿ ಶಿಕ್ಷಕರು ಕೇವಲ ಪಾಠ ಬೋಧಿಸುವ ವ್ಯಕ್ತಿಗಳಲ್ಲ, ಅವರು ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಿಸುವ ಮಾರ್ಗದರ್ಶಕರು. ಉತ್ತಮ ಶಿಕ್ಷಣಕ್ಕಾಗಿ ಉತ್ತಮ ಶಿಕ್ಷಕರ ನಿರ್ಮಾಣ ಅತ್ಯಗತ್ಯ

ಸೀಮಿತವಾಗದೆ, ತಂತ್ರಜ್ಞಾನ, ಡಿಜಿಟಲ್ ಸಂಪನ್ಮೂಲಗಳು, ಸಂವಹನ ಕೌಶಲ್ಯ ಮತ್ತು ಹೊಸ ಬೋಧನಾ ವಿಧಾನಗಳನ್ನು ಬಳಸಲು ಪ್ರೇರಣೆ ನೀಡುತ್ತಿದ್ದರು. ಮಹಿಳೆಯರಿಗಾಗಿ ಶಿಕ್ಷಣ ಸಂಸ್ಥೆಗಳನ್ನು ತೆರೆದು ಮಹಿಳಾ ಶಿಕ್ಷಕರು ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ವೃತ್ತಿಜೀವನ ಅವಕಾಶ ಮಾಡಿಕೊಟ್ಟರು. ಡಾ. ಅಪ್ಪ ಅವರು ಶೈಕ್ಷಣಿಕ ಪರಂಪರೆಯಲ್ಲಿ ಶಿಕ್ಷಕರಿಗೆ ವಿಶೇಷ ಸ್ಥಾನ ನೀಡಿದ್ದರು.

# ಶಿಕ್ಷಕರಲ್ಲಿ ಪ್ರಾಮಾಣಿಕತೆ, ಛಲಗಾರಿಕೆ, ಶ್ರದ್ಧೆ ಮುಖ್ಯ

ಕಲಬುರಗಿ: ವಿದ್ಯಾರ್ಥಿಗಳನ್ನು ದೇಶದ ಅಮೂಲ್ಯ ಸಂಪತ್ತನ್ನಾಗಿಸುವ ದೊಡ್ಡ ಜವಾಬ್ದಾರಿ ಶಿಕ್ಷಕರ ಮೇಲಿದೆ. ಶಿಕ್ಷಕರು ತಮ್ಮ ಕರ್ತವ್ಯವನ್ನು ಬದ್ಧತೆ, ಪ್ರಾಮಾಣಿಕತೆಯಿಂದ ಮಾಡಬೇಕು. ತಮ್ಮ ವಿದ್ಯಾರ್ಥಿಗಳು ಮತ್ತು ಶಾಲೆಯನ್ನು ಉನ್ನತ ಸಾಲಿನಲ್ಲಿ ಸೇರ್ಪಡೆಗೊಳಿಸಬೇಕು ಎಂಬ ಛಲಗಾ–ರಿಕೆ ಇರಬೇಕು. ಶ್ರದ್ಧೆಯೊಂದಿಗೆ ಕೆಲಸ ಸಲ್ಲಿಸುವುದು ಅಗತ್ಯವಾಗಿದೆ ಎಂದು ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಮುಖ್ಯ ಶಿಕ್ಷಕ ನಿಂಗಪ್ಪ ಸಿ.ಮಂಗೊಂಡಿ ಮಾರ್ಮಿಕವಾಗಿ ಹೇಳಿದರು.

ನಗರದ ಆಳಂದ ರಸ್ತೆಯ ಖಾದ್ರಿ ಚೌಕ್‌ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಬುಧವಾರ ಸಂಜೆ ಏರ್ಪಡಿಸಿದ್ದ ತಮಗೆ ಏರ್ಪಡಿಸಿದ್ದ ಗೌರವ ಸತ್ಕಾರ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ, ಅವರು ಮಾತನಾಡಿದರು. ನಾನು ಯಾವುದೇ ಪ್ರಶಸ್ತಿ–ಪುರಸ್ಕಾರ, ಗೌರವ ಬಯಸಿದವನಲ್ಲ. ನನ್ನ ಪಾಡಿಗೆ ನಾನು ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸುವುದಷ್ಟೇ ನನಗೆ ಗೊತ್ತು. ನಮ್ಮ ಶಾಲೆಗೆ ಪಿಎಂಶ್ರೀ ಯೋಜನೆ ಅಡಿಯಲ್ಲಿ ಗೌರವ, ಸ್ವಾಭಿಮಾನಿ ಶಾಲೆ ಪ್ರಶಸ್ತಿ ದೊರೆತಿದೆ. ರಾಜ್ಯ ಮಟ್ಟದ ಈ ಪ್ರಶಸ್ತಿ ನನಗೆ ದೊರೆತಿರುವುದು ಕಾರ್ಯಕ್ಕೆ ಸಹಕಾರ ನೀಡದವರು ಮತ್ತು ನನ್ನ ವಿದ್ಯಾರ್ಥಿಗಳಿಗೆ ದೊರೆತಿದೆ ಎಂದು ಭಾವಿಸುತ್ತೇನೆ ಎಂದರು.

ಉಪನ್ಯಾಸಕ ಎಚ್.ಬಿ.ಪಾಟೀಲ್ ಮಾತನಾಡಿ, ಒಬ್ಬ ಮಾದರಿ, ಆದರ್ಶ ಶಿಕ್ಷಕ ಎಂದರೆ ಹೇಗಿರಬೇಕು ಎಂಬುದಕ್ಕೆ ಮಂಗೊಂಡಿಯವರು ಉದಾಹರಣೆಯಾಗಿದ್ದಾರೆ. ಅವರಲ್ಲಿರುವ ಕಾಳಜಿ, ಕರ್ತವ್ಯದ ಬಗ್ಗೆ ಶ್ರದ್ಧೆ ಮಾದರಿಯಾಗಿದೆ. ಗುಂಜ ಬಬಲಾದ ಗ್ರಾಮದಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆ ಒಂದು ಆದರ್ಶ, ಮಾದರಿ ಶಾಲೆಯನ್ನಾಗಿಸುವ ಮೂಲಕ, ಶಾಲೆ, ಗ್ರಾಮದ ಕೀರ್ತಿಯನ್ನು ರಾಜ್ಯ, ದೇಶ ಮಟ್ಟದಲ್ಲಿ ಪಸರಿಸುವ ಕಾರ್ಯ ಮಾಡಿರುವುದು ನಿಜಕ್ಕೂ ಶ್ಲಾಘನೀಯ ಮತ್ತು ಅಭಿನಂದನಾರ್ಹವಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಅಮರ ಜಿ.ಬಂಗರಗಿ, ಶಿಕ್ಷಕಿ ಪೂಜಾ ಹೂಗಾರ ಹಾಗೂ ವಿದ್ಯಾರ್ಥಿಗಳಿದ್ದರು.

# ಅಪ್ಪಾ ಪಬ್ಲಿಕ್ ಶಾಲೆಯಲ್ಲಿ ಇಂಟ್ರಾ–ಸ್ಕೂಲ್ ಸ್ಪೆಲ್ಲಿಂಗ್ ಬಿ ಸ್ಪರ್ಧೆ(ಗ್ರೇಡ್ 2)

ಕಲಬುರಗಿ:2026–27ನೇ ಶೈಕ್ಷಣಿಕ ವರ್ಷದ 6ನೇ ಅಧ್ಯಾಯದ ಇಂಟ್ರಾ–ಸ್ಕೂಲ್ ಸ್ಪೆಲ್ಲಿಂಗ್ ಬೀ ಸ್ಪರ್ಧೆ ಸೆಪ್ಟೆಂಬರ್ 08, 2026ಮಂಗಳವಾರದಂದು ಅಪ್ಪಾ ಪಬ್ಲಿಕ್ ಶಾಲೆಯಲ್ಲಿ ಎರಡನೆಯ ತರಗತಿಯ ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿತ್ತು. ಎರಡನೆಯ ತರಗತಿಯ 235 ವಿದ್ಯಾರ್ಥಿಗಳಿಗೆ, ಈ ಮೊದಲು ಬರವಣಿಗೆಯಲ್ಲಿ ಮೂರು ಸುತ್ತುಗಳನ್ನು ನೆಡಸಲಾಗಿತ್ತು. ಈ ಮುರು ಸುತ್ತಿನ ಸರಾಸರಿಯ ಆಧಾರದ ಮೇಲೆ 52 ವಿದ್ಯಾರ್ಥಿಗಳನ್ನು ಆಯ್ಕೆಯಾಗಿ, ವೇದಿಕೆಯ ಮೇಲೆ ನೆಡಯುವ ಸುತ್ತುಗಳಲ್ಲಿ ಭಾಗವಹಿಸಿದರು. ಮೌಖಿಕ ಸುತ್ತುಗಳಲ್ಲಿ ತಮಗೆ ಕೊಟ್ಟ ಶಬ್ದವನ್ನು ಸರಿಯಾಗಿ ಉತ್ತರಿಸಿ ಮುಂದಿನ ಸುತ್ತಿಗೆ ಅರ್ಹರಾದರು. ತಪ್ಪಾಗಿ ಉತ್ತರಿಸಿದ ವಿದ್ಯಾರ್ಥಿ ಸ್ಪರ್ಧೆಯಿಂದ ಹೊರಗಾದರು. ಹೀಗೆ ನೆಡೆದ 13 ಸುತ್ತುಗಳ ನಂತರ ಮೂರೂ ವಿದ್ಯಾರ್ಥಿಗಳು ಮೊದಲ ಮೂರೂ ಸ್ಥಾನಕ್ಕೆ ಪೈಪೋಟಿ ನೆಡೆಸಿದರು. 14ನೆಯ ಸುತ್ತಿನಲ್ಲಿ ನೆಡದ ರಾಪಿಡ್ ಫೈರ್ ನಲ್ಲಿ ಪ್ರತಿ ಸ್ಪರ್ಧಿಗೆ ಕೊಟ್ಟ 10 ಶಬ್ದಗಳಲ್ಲಿ ವಿಜೇತರನ್ನು ಗುರುತಿಸಲಾಯಿತು.

ರಾಪಿಡ್ ಫೈರ್ ನಲ್ಲಿ ಕುಮಾರ ಸಾತ್ವಿಕ್ ಕಿರಣಗಿ, 10 ರಲ್ಲಿ 9 ಶಬ್ದಗಳನ್ನು ಸರಿಯಾಗಿ ಉತ್ತರಿಸಿ ಪ್ರಥಮ ಸ್ಥಾನ ಪಡೆದರೆ, ಕುಮಾರಿ ಆರಾಧ್ಯ ಖಜೂರಗಿ 10 ರಲ್ಲಿ 8 ಶಬ್ದಗಳನ್ನು ಸರಿಯಾಗಿ ಉತ್ತರಿಸಿ ದ್ವಿತೀಯ ಸ್ಥಾನ ಪಡೆದು, 10 ರಲ್ಲಿ 7 ಶಬ್ದಗಳನ್ನು ಸರಿಯಾಗಿ ಉತ್ತರಿಸಿ ಕುಮಾರ ಶ್ರೇಯಸ್ ತೃತೀಯ ಸ್ಥಾನ ತಮ್ಮದಾಗಿಸಿಕೊಂಡರು. ಹಲವು ಸುತ್ತಿನ ತೀವ್ರ ಸ್ಪೆಲ್ಲಿಂಗ್ ಸವಾಲುಗಳನ್ನ ಯಶಸ್ವಿಯಾಗಿ ಯದುರಿಸಿ, ತ್ವರಿತ ಚಿಂತನೆ ಹಾಗೂ ಆತ್ಮವಿಶ್ವಾಸದ ಪ್ರದರ್ಶನಗಳ ನಂತರ, ವಿಜೇತರ ಸನ್ಮಾನದೊಂದಿಗೆ, ಈ ಅದ್ಭುತ ಸ್ಪರ್ಧೆ ಎರಡನೆಯ ತರಗತಿಗೆ ಮುಕ್ತಾಯವಾಯಿತು. ವಿಜೇತರಿಗೆ ಪಾರಿತೋಷಕ, ಪ್ರಶಂಸೆ ಪತ್ರವನ್ನು ನೀಡಿ ಗೌರವಿಸಲಾಯಿತು.

# 10 ದಿನ ಪೂರೈಸಿದ ರೈತರ ಧರಣಿ ಸತ್ಯಾಗ್ರಹ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಳೆಯ ಕೊರತೆ ಹಾಗೂ ಅಸಮರ್ಪಕ ಮಳೆಯಿಂದಾಗಿ ವಿಜಯಪುರ ಜಿಲ್ಲೆಯ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಸಂಪೂರ್ಣ ಜಿಲ್ಲೆಯ ಬರಪೀಡಿತವೆಂದು ಘೋಷಿಣೆ ಮಾಡಿ ಪರಿಹಾರ ಕೊಡಬೇಕು ಎಂದು ಇಂಡಿಯ ರೈತ ಮುಖಂಡ ಹಾಗೂ ವಕೀಲ ದತ್ತಾತ್ರೇಯ ಡೋಣಿ ಹೇಳಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಜಿಲ್ಲೆಯ ಅಂಬೇಡ್ಕರ ವೃತ್ತದಲ್ಲಿ ಜಿಲ್ಲೆಯನ್ನು ಸಂಪೂರ್ಣ ಬರಗಾಲ ಘೋಷಣೆ ಮಾಡುವಂತೆ ಆಗ್ರಹಿಸಿ ನಡೆದಿರುವ ಹೋರಾಟದಲ್ಲಿ ವೇದಿಕೆ ಉದ್ದೇಶಿಸಿ ಅವರು ಮಾತನಾಡಿದರು ವಿಜಯಪುರ ಜಿಲ್ಲೆಯ 13 ತಾಲೂಕುಗಳ ಪೈಕಿ ಕೇವಲ ವಿಜಯಪುರ, ನಿಡಗುಂದಿ ಕೊಲ್ಹಾರ, ಪೂರ್ಣ ಬರ, ಬಸವನಬಾಗೇವಾಡಿ, ತಿಕೋಟಾ, ಬಬಲೇಶ್ವರ ತಾಲೂಕುಗಳನ್ನು ಮಧ್ಯಮ ಬರಪೀಡಿತ ತಾಲೂಕುಗಳೆಂದು ಘೋಷಿಸಿರುವ ಸರಕಾರ ಉಳಿದ 7 ತಾಲೂಕುಗಳಲ್ಲಿ ಬರ ಇದ್ದರೂ ಘೋಷಣೆ ಮಾಡದೆ ಇರುವುದರಿಂದ ರೈತರಿಗೆ ಅನ್ಯಾಯವಾಗುತ್ತಿದೆ. ಕೂಡಲೇ ಸಂಪೂರ್ಣ ವಿಜಯಪುರ ಜಿಲ್ಲೆಯನ್ನು ಬರಪೀಡಿತ ಎಂದು ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು.



ವಿಜಯಪುರ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತವೆಂದು ಘೋಷಿಸಲು ಆಗ್ರಹಿಸಿ ನಡೆದ ಧರಣಿ

ರೈತ ಮುಖಂಡರಾದ ಬಸವರಾಜ ಹಂಜಗಿ ಹಾಗೂ ಬಸವರಾಜ ರೆಡ್ಡಿ ಅವರು ಮಾತನಾಡುತ್ತ, ಬಹುತೇಕ ಭಾಗಗಳಲ್ಲಿ ರೈತರು ಮಳೆಯಾಶ್ರಿತ ಕೃಷಿಯನ್ನೇ ಅವಲಂಬಿಸಿದ್ದು, ಪ್ರಸಕ್ತ ಸಾಲಿನಲ್ಲಿ ಮಳೆಯ ಕೊರತೆಯಿಂದ ಬೆಳೆಗಳು ಹಾನಿಗೊಳಗಾಗುವ ಆತಂಕ ಎದುರಾಗಿದೆ ಎಂದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ, ಮುಖಂಡರಾದ ಮಹಾದೇವ ಬನಸೋಡೆ, ರಾಮನಗೌಡ ಪಾಟೀಲ, ಬಸವರಾಜ ರೆಡ್ಡಿ, ಮಳೆಪ್ಪ, ಈರಪ್ಪ ಕುಳೆಕುಮಟಗಿ, ಶಿವಾನಂದಯ್ಯ ಹಿರೇಮಠ, ವಸಂತ ಭೈರಮಾಡಿ, ಅಮರೇಶ ಭೈರಗೊಂಡ, ಅಭಿಶೇಖ ಕಾಂಬಳೆ, ಮಾಳು ಪೂಜಾರಿ, ಗೇನಪ್ಪ ಬಿರಾದಾರ, ಸಿದ್ದನಗೌಡ ಬಿರಾದಾರ, ಸೇರಿದಂತೆ ಇತರರು ಇದ್ದರು.

# ಬರಪೀಡಿತವೆಂದು ಘೋಷಿಸದಿದ್ದರೆ ಭಾವಿಗಿಳಿದು ಹೋರಾಟ :ರಾಜುಗೌಡ

■ ಉದಯರಶ್ಮಿ ದಿನಪತ್ರಿಕೆ

ತಾಳಿಕೋಟೆ: ತಾಳಿಕೋಟೆ, ಮುದ್ದೇಬಿಹಾಳ ಹಾಗೂ ದೇವರಹಿಪ್ಪರಗಿ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಿ, ರೈತರಿಗೆ ಸೂಕ್ತ ಪರಿಹಾರ ಒದಗಿಸಬೇಕೆಂದು ಆಗ್ರಹಿಸಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ನಡೆಯುತ್ತಿರುವ ಧರಣಿ ಸತ್ಯಾಗ್ರಹಕ್ಕೆ ದೇವರಹಿಪ್ಪರಗಿ ಮತಕ್ಷೇತ್ರದ ಶಾಸಕ ರಾಜುಗೌಡ ಪಾಟೀಲ ಅವರು ಬುಧವಾರ ಬೆಂಬಲ ಸೂಚಿಸಿದರು.

ಧರಣಿಯ ಏಳನೇ ದಿನದಂದು ಸ್ಥಳಕ್ಕೆ ಆಗಮಿಸಿದ ಶಾಸಕ ರಾಜುಗೌಡ ಪಾಟೀಲ ಅವರು ರೈತರನ್ನು ಉದ್ದೇಶಿಸಿ ಮಾತನಾಡಿ, ಬರ ಪರಿಸ್ಥಿತಿಗೆ ಸಂಬಂಧಿಸಿದಂತೆ ಸೆ.21ರಿಂದ ಮೂರು ದಿನಗಳ ಕಾಲ ನಡೆಯಲಿರುವ ವಿಧಾನಮಂಡಲದ ವಿಶೇಷ ಅಧಿವೇಶನದಲ್ಲಿ ಸರ್ಕಾರದ ಗಮನ ಸೆಳೆಯುವುದಾಗಿ ಭರವಸೆ ನೀಡಿದರು.

ತಾಳಿಕೋಟೆ, ದೇವರಹಿಪ್ಪರಗಿ ಹಾಗೂ ಮುದ್ದೇಬಿಹಾಳ ತಾಲೂಕುಗಳನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರಿಸುವಂತೆ ಸರ್ಕಾರಕ್ಕೆ ಒತ್ತಡ ಹೇರುವುದಾಗಿ ತಿಳಿಸಿದ ಅವರು, ಈ ಮೂರು ತಾಲೂಕುಗಳನ್ನು ಬರ ಘೋಷಣೆಯಿಂದ ಕೈಬಿಟ್ಟಿರುವುದು ರೈತರಿಗೆ ಅನ್ಯಾಯವಾಗಿದೆ ಎಂದು ಹೇಳಿದರು.

ಅಧಿವೇಶನದ ಸಂದರ್ಭದಲ್ಲಿ ಸದನದ ಬಾವಿಗಿಳಿದು ಹೋರಾಟ ನಡೆಸಿಯಾದರೂ ಸರ್ಕಾರದ ಮೇಲೆ ಒತ್ತಡ ತಂದು, ಉಳಿದ ತಾಲೂಕುಗಳನ್ನೂ ಬರಪೀಡಿತ ತಾಲೂಕುಗಳೆಂದು ಘೋಷಿಸುವಂತೆ ಒತ್ತಾಯಿಸಲಾಗುವುದು ಎಂದರು.



ರೈತ ಸಂಘದ ನೇತೃತ್ವದಲ್ಲಿ ತಾಳಿಕೋಟೆಯಲ್ಲಿ ನಡೆಯುತ್ತಿರುವ ಧರಣಿ। ಧರಣಿಗೆ ಶಾಸಕ ರಾಜುಗೌಡ ಬೆಂಬಲ

ಈ ಸಂದರ್ಭದಲ್ಲಿ ಜೆಡಿಎಸ್ ತಾಲೂಕಾ ಅಧ್ಯಕ್ಷ ಮಡುಸಾಹುಕಾರ ಬಿರಾದಾರ, ವೀರೇಶ ಕಾರಗನೂರ, ಅಶೋಕ ಅಸ್ಕಿ, ರಾಜುಗೌಡ ಕೊಳೂರ, ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ, ತಾಲೂಕು ಅಧ್ಯಕ್ಷ ಬಾಲಪ್ಪಗೌಡ ಲಿಂಗದಳ್ಳಿ, ಉಪಾಧ್ಯಕ್ಷ ರಾಮನಗೌಡ ಹಾದಿಮನಿ, ಬಸನಗೌಡ ಪಾಟೀಲ, ಮಹಾಂತಯ್ಯ ಹಿರೇಮಠ, ಮಂಜುನಾಥ ಬಡಿಗೇರ, ಬಸವರಾಜ ಹೇರೂರ, ಮಲ್ಲಿಕಾರ್ಜುನ ಬಿರಾದಾರ, ಚೆನ್ನವೀರ ಹಿರೇಮಠ, ಶರಣಗೌಡ ಅಂಗಡಗೇರಿ, ಅಶೋಕ ಉಪ್ಪಲದಿನ್ನಿ, ಶ್ರೀನಿವಾಸ ಗೊಟಗುಣಕಿ, ಮಡಿವಾಳಪ್ಪ ಕಲಬುರಗಿ, ಕಾಶಿಲಿಂಗ ಬೊಮ್ಮನಹಳ್ಳಿ, ನಾನಾಗೌಡ ಪಾಟೀಲ, ಶಂಕರಗೌಡಪ್ಪ ಬಿರಾದಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಸೆ.16ಕ್ಕೆ ಕೊಲ್ಹಾರದಲ್ಲಿ ರೈತ ಜನತಾ ಸಭೆ। ಜಿಲ್ಲಾಧಿಕಾರಿ ಸೇರಿ ಹಿರಿಯ ಅಧಿಕಾರಿಗಳ ಖುದ್ದು ಹಾಜರಿಗೆ ಆಗ್ರಹ

# ಮುಳುಗಡೆ ಸಂತ್ರಸ್ತರ ಸಮಸ್ಯೆ ಬಗೆಹರಿಸದಿದ್ದರೆ ಹೆದ್ದಾರಿ ಬಂದ್

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಆಲಮಟ್ಟಿ ಜಲಾಶಯದ ಹಿನ್ನೀರಿನಿಂದ ಮುಳುಗಡೆಯಾದ ಕೊಲ್ಹಾರ ಪಟ್ಟಣ ಹಾಗೂ ತಾಲೂಕು ವ್ಯಾಪ್ತಿಯ ಸಂತ್ರಸ್ತರ ವಿವಿಧ ಬೇಡಿಕೆಗಳನ್ನು ಈಡೇ–ರಿಸಲು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕೊಲ್ಹಾರ ತಾಲೂಕು ಘಟಕದ ನೇತೃತ್ವದಲ್ಲಿ ಸೆ.16ರಂದು ಬೃಹತ್ ಪ್ರತಿಭಟನೆ ಹಾಗೂ ರೈತ ಜನತಾ ಸಭೆ ಹಮ್ಮಿಕೊಳ್ಳಲಾಗಿದೆ.

ಸಂತ್ರಸ್ತರಿಗೆಸೂಕ್ತನಿವೇಶನಹಂಚಿಕೆಮಾಡದಿರುವುದು, ನೆಪವೊಡ್ಡಿ ಉತಾರೆ ನೀಡದೆ ವಿಳಂಬ ಮಾಡುತ್ತಿರುವುದು ಸೇರಿದಂತೆ ಹಲವು ಸಮಸ್ಯೆಗಳಿಗೆ ಅಧಿಕಾರಿಗಳು ಸ್ಪಂದಿಸದಿರುವುದನ್ನು ಖಂಡಿಸಿ ತಹಶೀಲ್ದಾರ್ ಸಂತೋಷ ಮ್ಯಾಗೇರಿ ಅವರಿಗೆ ಮನವಿ ಸಲ್ಲಿಸಲಾಯಿತು.

ಸೆ.16ರ ಬೆಳಿಗ್ಗೆ 12 ಗಂಟೆಯೊಳಗೆ ಕೊಲ್ಹಾರ ಪಟ್ಟಣ ಪಂಚಾಯಿತಿ ಎದುರು ನಡೆಯುವ ರೈತ ಜನತಾ ಸಭೆಗೆ ವಿಜಯಪುರ ಜಿಲ್ಲಾಧಿಕಾರಿ, ಬಾಗಲಕೋಟೆ ಪುನರ್ವಸತಿ ಹಾಗೂ ಭೂಸ್ವಾಧೀನ ಅಧಿಕಾರಿಗಳು, ಆಲಮಟ್ಟಿ ಪುನರ್ವಸತಿ ಅಧಿಕಾರಿಗಳು, ಹೆಸ್ಕಾಂ ಅಧೀಕ್ಷಕ ಅಭಿಯಂತರರು ಹಾಗೂ ಕೆಬಿಜೆಎನ್‌ಎಲ್ ವ್ಯವಸ್ಥಾಪಕ ನಿರ್ದೇಶಕರು ಖುದ್ದು ಆಗಮಿಸಿ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸಬೇಕು ಎಂದು ತಾಲೂಕು ಅಧ್ಯಕ್ಷ ಸೋಮು ಭೀ. ಬಿರಾದಾರ ಹಾಗೂ ಸಂತ್ರಸ್ತರು ಆಗ್ರಹಿಸಿದ್ದಾರೆ.

ನಿವೇಶನ ಹಂಚಿಕೆಯಲ್ಲಿನ ತಾರತಮ್ಯ ನಿವಾರಿಸಿ, ಸಿಓಡಿ ಪ್ರಕರಣ ಹೊರತುಪಡಿಸಿ ನೈಜ ಮೂಲ ಸಂತ್ರಸ್ತರಿಗೆ ತಕ್ಷಣ ಉತಾರೆ ನೀಡಬೇಕು. ಸಿಓಡಿ ತನಿಖಾ ವರದಿಯನ್ನು ಬಹಿರಂಗಪಡಿಸಬೇಕು. ಕುಟುಂಬದ ಎಲ್ಲ ಮಕ್ಕಳಿಗೂ ನಿವೇಶನ ನೀಡಬೇಕು ಹಾಗೂ ಬಡತನದ ಕಾರಣ ಮಾರಾಟವಾದ ಅಥವಾ ಪಡೆದ ನಿವೇಶನಗಳ ರದ್ದು ಆದೇಶ ಹಿಂಪಡೆಯಬೇಕು ಎಂದು ಒತ್ತಾಯಿಸಲಾಗಿದೆ.



ಕೊಲ್ಹಾರ ಪಟ್ಟಣದ ಅಸಮರ್ಪಕ ಒಳಚರಂಡಿ ಕಾಮಗಾರಿಯನ್ನು ಸರಿಪಡಿಸಿ, ಕಾಮಗಾರಿಯಲ್ಲಿನ ಲೋಪದ ಕುರಿತು ತನಿಖೆ ನಡೆಸಬೇಕು. ಮುಳವಾಡ ಏತ ನೀರಾವರಿ 'ಎ' ಮತ್ತು 'ಬಿ' ಸ್ಕೀಮ್ ಮೂಲಕ ಅಖಂಡ ವಿಜಯಪುರ ಜಿಲ್ಲೆಯ ಕೆರೆಗಳನ್ನು ತುಂಬಿಸಲು 2027ರ ಜನವರಿಯಿಂದ ಜುಲೈವರೆಗೆ 20 ಟಿಎಂಸಿ ನೀರು ಕಾಯ್ದಿ–ರಿಸಬೇಕು. ರೈತರ ಜಮೀನುಗಳಿಗೆ ಸಮರ್ಪಕ 2 ಫೇಸ್ ಹಾಗೂ 3 ಫೇಸ್ ವಿದ್ಯುತ್ ಪೂರೈಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ರೈತ ಸಂಘದ ರಾಜ್ಯಾಧ್ಯಕ್ಷ ಚುನ್ನಪ್ಪ ಪೂಜಾರಿ ಹಾಗೂ ರಾಜ್ಯ ಗೌರವಾಧ್ಯಕ್ಷ ಶಶಿಕಾಂತ ಗುರೂಜಿ ಅವರ ಸಮ್ಮುಖದಲ್ಲಿ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸದಿದ್ದರೆ ರಾಷ್ಟ್ರೀಯ ಹೆದ್ದಾರಿಯ ಕೊಲ್ಹಾರ ಸೇತುವೆ ಬಂದ್ ಮಾಡಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಮುಖಂಡರು ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ಕಲ್ಲಪ್ಪ ಗಿಡ್ಡಪ್ಪಗೋಳ, ರಮೇಶ ಬೀಳಗಿ, ಶಶಿಕಾಂತ ಬಿರಾದಾರ, ಸತೀಶ ಕುಲ್ಲಳ್ಳಿ, ಮುದಕನ್ನ ಚಲವಾದಿ, ಯಮನಪ್ಪ ಬಿಸ್ತಗೊಂಡ, ಸಂಗಪ್ಪ ಗುಳಗೊಂಡ ಸೇರಿದಂತೆ ಹಲವು ಸಂತ್ರಸ್ತರು ಹಾಗೂ ರೈತ ಮುಖಂಡರು ಉಪಸ್ಥಿತರಿದ್ದರು.

# ಸಪರ್ಪಕ ವಿದ್ಯುತ್ ಗೆ ಆಗ್ರಹಿಸಿ ರೈತರಿಂದ ಹೆಸ್ಕಾಂ ಕಚೇರಿಗೆ ಬೀಗ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ರೈತರಿಗೆ ನಿರಂತರ ಹಗಲು ಹೊತ್ತು ಏಳು ತಾಸು ವಿದ್ಯುತ್ ಆಗ್ರಹಿಸಿ ಇಂದು ರೈತರು ಹೆಸ್ಕಾಂ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ಮಾಡಿದರು.

ಶಿರಶ್ಯಾಡದ ರೈತ ಮುಖಂಡ ಬಾಳು ಮುಳಜಿ ಮಾತನಾಡಿ, ವಿದ್ಯುತ್ ಸರಬರಾಜಿನಲ್ಲಿ ಪದೇ ಪದೇ ವ್ಯತ್ಯಯ ಉಂಟಾಗಿ ರೈತರಿಗೆ ತೊಂದರೆ ಯಾಗುತ್ತಿದೆ. ಅದಲ್ಲದೆ ರಾತ್ರಿ ಮೂರು ಗಂಟೆಯಿಂದ ಬೆಳಗ್ಗೆ 10 ಗಂಟೆಯ ವರೆಗೆ ವಿದ್ಯುತ್ ನೀಡುವದರಿಂದ ರೈತರಿಗೆ ತೊಂದರೆ ಅನುಭವಿಸಬೇಕಾಗುತ್ತದೆ. ರಾತ್ರಿ 10 ಗಂಟೆಯ ನಂತರ ಸಿಂಗಲ್ ಫೇಜ್ ವಿದ್ಯುತ ನೀಡುವದರಿಂದ ಮತ್ತು ಅನೇಕ ಕಡೆ ವಿದ್ಯುತ ವ್ಯತ್ಯಯ ಮಾಡುವದರಿಂದ ವಿದ್ಯಾರ್ಥಿಗಳಿಗೆ ಓದಲು ತೊಂದರೆಯಾಗುತ್ತಿದೆ. ವಿದ್ಯುತ ವ್ಯವಸ್ಥೆ ಸರಿಯಾಗಿ ಮಾಡಬೇಕೆಂದು ಆಗ್ರಹಿಸಿ ಹೆಸ್ಕಾಂ ಕಚೇರಿಗೆ ಬೀಗ ಹಾಕಿ ಪ್ರತಿಭಟಿಸಿದರು.

ರೈತರು ಬರಗಾಲ ಎದುರಿಸುತ್ತಿದ್ದು ಮಳೆಯಿಲ್ಲದೆ ತೊಂದರೆಯಲ್ಲಿದ್ದಾರೆ. ಕೃಷ್ಣಾಕಾಲುವೆನೀರುಬಿಡಬೇಕಂದರೆ ವಿದ್ಯುತ್ ತೊಂದರೆ ರೈತರು ಅನುಭವಿಸುತ್ತಿದ್ದಾರೆ ಎಂದರು.

ಅಧಿಕಾರಿ ಘಟನಾ ಸ್ಥಳಕ್ಕೆ ಬಂದು ನಿರಂತರ ಹಗಲು ಏಳು ಗಂಟೆ ವಿದ್ಯುತ್ ನೀಡುವ ಭರವಸೆಯ ಮೇರೆಗೆ ಕಚೇರಿಯ ಬೀಗ ತೆಗೆದರು.

ಸುಮಾರು 500 ಕ್ಕೂ ಹೆಚ್ಚು ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಅನೀಲಗೌಡ ಬಿರಾದಾರ, ಭೀಮಾಶಂಕರ ಮಸಳಿ, ಅಶೋಕ ಅಕಲಾದಿ, ಪ್ರಶಾಂತ ಲಾಳಸಂಗಿ, ಮಲ್ಲು ದೇವರ, ರಾಮು ಮೇತ್ರಿ, ರಾಜು ಕಟಕದೊಂಡ, ಮೋಹನ ಮೇತ್ರಿ, ಕುಮಾರ ಪ್ರಚಂಡಿ, ಬಾಗೇಶ ಎಚ್, ಪ್ರಶಾಂತ ಅವಟಿ, ಜ್ಯೋತಿಬಾ ಕದಮ್, ದಶರಥ ಕದಮ, ಇರಸಂಗಪ್ಪ ನೂಲೂರ ಮತ್ತಿತರಿದ್ದರು.



# ಆಲಮೇಲ: 'ಪೀರ್‌ಗಾಲಿಬ್ ಸಾಹೇಬ್ ಅಗಸಿ' ಲೋಕಾರ್ಪಣೆ



■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಪಟ್ಟಣದ ಸೌಹಾರ್ದ ಹಾಗೂ ಐತಿಹಾಸಿಕ ಪರಂಪರೆಯ ಸಂಕೇತವಾಗಿ ನೂತನವಾಗಿ ನಿರ್ಮಿಸಲಾಗಿರುವ 'ಹಜರತ್ ಪೀರ್‌ಗಾಲಿಬ್ ಸಾಹೇಬ್ ಅಗಸಿ' (ಪ್ರವೇಶದ್ವಾರ) ಗುರುವಾರ ಸಾಯಂಕಾಲ ಅದ್ದೂರಿಯಾಗಿ ಲೋಕಾರ್ಪಣೆಗೊಂಡಿತು.

ಮಾಜಿ ಸಚಿವ ದಿವಂಗತ ಎಂ.ಸಿ. ಮನಗೂಳಿ ಅವರ ಕನಸಿನ ಯೋಜನೆಯಾದ ಈ ಅಗಸಿ ನಿರ್ಮಾಣಕ್ಕೆ ಸರ್ಕಾರದಿಂದ 65 ಲಕ್ಷ ಹಾಗೂ ವೈಯಕ್ತಿಕ ಹಾಗೂ ದಾನಿಗಳ ನೆರವಿನೊಂದಿಗೆ ಒಟ್ಟು 1 ಕೋಟಿಗೂ ಅಧಿಕ ವೆಚ್ಚ ಮಾಡಲಾಗಿದೆ. ಸುಮಾರು 8 ವರ್ಷಗಳ ಸುದೀರ್ಘ ಕಾಯುವಿಕೆಯ ನಂತರ, ಶಾಸಕ ಅಶೋಕ ಮನಗೂಳಿ ಅವರ ವಿಶೇಷ ಪ್ರಯತ್ನದಿಂದ ಪುರಾತನ ಶೈಲಿ ಹಾಗೂ ಆಧುನಿಕ ವಾಸ್ತುಶಿಲ್ಪದ ಸಮ್ಮಿಶ್ರಣದಲ್ಲಿ ನಿರ್ಮಿಸಲಾದ ಈ ಆಕರ್ಷಕ ಪ್ರವೇಶದ್ವಾರದ ಕಾಮಗಾರಿ ಪೂರ್ಣಗೊಂಡು ಸಾರ್ವಜನಿಕರ ಬಳಕೆಗೆ ಮುಕ್ತಾಯಗೊಂಡಿದೆ.

ಈ ಹಿಂದೆ ಜೀರ್ಣಾವಸ್ಥೆಯಲ್ಲಿದ್ದ ಅಗಸಿಯ ಜಾಗದಲ್ಲಿ ಪಟ್ಟಣಕ್ಕೆ ಸೂಕ್ತ ಪ್ರವೇಶದ್ವಾರ ನಿರ್ಮಿಸಬೇಕು ಎಂಬುದು ಎಂ.ಸಿ. ಮನಗೂಳಿ ಅವರ ಆಶಯವಾಗಿತ್ತು. ಲೋಕಾರ್ಪಣೆ ಸಂದರ್ಭದಲ್ಲಿ ನೂರಾರು ಮಹಿಳೆಯರು ಕುಂಭ ಹೊತ್ತು ಸಾಗಿದ ಭವ್ಯ ಮೆರವಣಿಗೆಯ ಮೂಲಕ ಪಟ್ಟಣದ ಗ್ರಾಮ ದೇವರೆಂದೇ ಪ್ರಸಿದ್ಧರಾದ ಪೀರ್‌ಗಾಲಿಬ್ ಸಾಹೇಬರ ಹೆಸರಿನ ಅಗಸಿಗೆ ಆಗಮಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಶಾಸಕ ಅಶೋಕ ಮನಗೂಳಿ ಹಾಗೂ ಜನಪ್ರತಿನಿಧಿ, ಮಠಾಧೀಶರು, ಗಣ್ಯಾತೀತ ಗಣ್ಯರು, ಆಲಮೇಲ ಪಟ್ಟಣ ಸೇರಿದಂತೆ ಸುತ್ತಲಿನ ಗ್ರಾಮದ ನಾಗರಿಕರು, ಸೇರಿದಂತೆ ಅನೇಕರಿದ್ದರು.

# ರೇಷ್ಮೆ ಬೆಳೆಯಿಂದ ಎಕರೆಗೆ 5 ಲಕ್ಷ ಲಾಭ: ಡಾ.ನಾಯಕ್

■ ಉದಯರಶ್ಮಿ ದಿನಪತ್ರಿಕೆ




ಚಡಚಣ: ಸರ್ಕಾರದ ಸಹಾಯಧನ ಹಾಗೂ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ರೈತರು ಒಂದು ಎಕರೆ ಪ್ರದೇಶದಲ್ಲಿ ರೇಷ್ಮೆ ಬೆಳೆ ಬೆಳೆಸುವ ಮೂಲಕ ವರ್ಷಕ್ಕೆ ಕನಿಷ್ಠ 5 ಲಕ್ಷದವರೆಗೆ ಲಾಭ ಪಡೆಯಬಹುದು ಎಂದು ವಿಜ್ಞಾನಿ ಡಾ. ಪರಮೇಶ್ವರ ನಾಯಕ್ ಹೇಳಿದರು.

ಭತಗುಣಕಿ ಗ್ರಾಮದ ಮುದ್ದೇಗೌಡ ಭೀಮನಗೌಡ ಪಾಟೀಲ ಅವರ ತೋಟದಲ್ಲಿ ಗುರುವಾರ ಆಯೋಜಿಸಿದ್ದ ರೇಷ್ಮೆ ತಾಂತ್ರಿಕ ಕಾರ್ಯಾಗಾರ ಹಾಗೂ ವಸ್ತು ಪ್ರದರ್ಶನದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ರೇಷ್ಮೆ ಕೃಷಿ ಲಾಭದಾಯಕವಾಗಿದ್ದು, ಕಡಿಮೆ ವೆಚ್ಚದಲ್ಲಿ ಹಾಗೂ ರಾಸಾಯನಿಕ ರಸಗೊಬ್ಬರಗಳ ಬಳಕೆಯಿಲ್ಲದೆ ಸಾವಯವ ಪದ್ಧತಿಯಲ್ಲಿ ಕೈಗೊಳ್ಳಬಹುದಾಗಿದೆ. ರೇಷ್ಮೆ ಬೆಳೆಗೆ ಸರ್ಕಾರದಿಂದ ವಿವಿಧ ರೀತಿಯ ಸಹಾಯಧನ ಹಾಗೂ ಪ್ರೋತ್ಸಾಹ ದೊರೆಯುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ರೇಷ್ಮೆ ಕೃಷಿಯತ್ತ ಮುಖ ಮಾಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ವಿಜಯಪುರದ ರೇಷ್ಮೆ ಉಪನಿರ್ದೇಶಕ ಸಿದ್ದರಾಜು ಎಸ್. ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ವಿಜಯಪುರದ ರೇಷ್ಮೆ ಸಹಾಯಕ ನಿರ್ದೇಶಕ ಬಿ.ವೈ. ಬಿರಾದಾರ, ರೇಷ್ಮೆ ವಿಸ್ತರಣಾಧಿಕಾರಿ ಗಂಗಾಧರ ಬಿ. ಜೇವೂರ, ಸಿಂದಗಿ ರೇಷ್ಮೆ ವಿಸ್ತರಣಾಧಿಕಾರಿ ಎಸ್.ಐ. ಗೋಲಗೊಂಡ, ಇಂಡಿ ರೇಷ್ಮೆ ವಿಸ್ತರಣಾಧಿಕಾರಿ ವ್ಹಿ.ಡಿ. ಬಜೆಂತ್ರಿ, ಹಿರಿಯ ತಾಂತ್ರಿಕ ಸಹಾಯಕಿ ವಾಸಂತಿ ಜೆ., ಕ್ಷೇಮಾಭಿವೃದ್ಧಿ ನೌಕರ ಎಸ್.ಎಲ್. ದಶವಂತ ಹಾಗೂ ಅಧಿಕಾರಿಗಳಾದ ಬಸವರಾಜ ಮೋಘಗಾರ ಸೇರಿದಂತೆ ರೇಷ್ಮೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸಾವಯವ ಕೃಷಿಕರಾದ ಪಾಂಡು ಪ್ಯಾಟಿ, ಮುದ್ದೇಗೌಡ ಭೀಮನಗೌಡ ಪಾಟೀಲ ಸೇರಿದಂತೆ ಚಡಚಣ ಹಾಗೂ ಇಂಡಿ ತಾಲೂಕಿನ ನೂರಾರು ರೇಷ್ಮೆ ಬೆಳೆಗಾರರು ಕಾರ್ಯಾಗಾರದಲ್ಲಿ ಭಾಗವಹಿಸಿ ರೇಷ್ಮೆ ಕೃಷಿಗೆ ಸಂಬಂಧಿಸಿದ ತಾಂತ್ರಿಕ ಮಾಹಿತಿ ಹಾಗೂ ಇಲಾಖೆಯ ಸೌಲಭ್ಯಗಳ ಕುರಿತು ಮಾಹಿತಿ ಪಡೆದುಕೊಂಡರು.

# ಎಂಬತ್ತರ ದಶಕಕ್ಕೆ ಕರೆದೊಯ್ಯುತ್ತಿರುವ ಎಐ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ರಾಮ್ ಎಮ್ ಇಟ್ಟಿ

ಬಾಗಲಕೋಟೆ (ಜಮಖಂಡಿ): ಕೈಯಲ್ಲಿ ಸ್ಮಾರ್ಟ್‌ಫೋನ್.. ಬೆರಳ ತುದಿಯಲ್ಲಿ ಕೃತಕ ಬುದ್ಧಿಮತ್ತೆ (AI).. ಕಲ್ಪನೆಗೆ ತಕ್ಕಂತೆ ಹಲವು ದಶಕಗಳ ಹಿಂದಿನ ಜಗತ್ತನ್ನೇ ಕಣ್ಣಮುಂದೆ ಕಟ್ಟಿಕೊಡುವ ಹೊಸ ಟ್ರೆಂಡ್ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ಸದ್ದು ಮಾಡುತ್ತಿದೆ.

ಸುಮಾರು 70–80 ರ ದಶಕದ ಕಾಲಘಟ್ಟದಂತೆ ಕಾಣುವ ಛಾಯಾಚಿತ್ರಗಳನ್ನು ಎಐ ತಂತ್ರಜ್ಞಾನದ ನೆರವಿನಿಂದ ಸೃಷ್ಟಿಸಿ WhatsApp Status, Instagram, Facebook ಸೇರಿದಂತೆ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುವ ಹವ್ಯಾಸ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ.

ಹಳೆಯ ಕಾಲದ ಗ್ರಾಮೀಣ ಮನೆಗಳು, ಮಣ್ಣಿನ ರಸ್ತೆಗಳು, ಎತ್ತಿನಗಾಡಿಗಳು, ಸಾಂಪ್ರದಾಯಿಕ ಉಡುಪು, ಹಳೆಯ ಕಾಲದ ಸೈಕಲ್‌ಗಳು, ಶಾಲಾ ವಾತಾವರಣ, ಜಾತ್ರೆ, ಸಂತೆ, ಹೊಲ–ಗದ್ದೆ ಹಾಗೂ ಕುಟುಂಬದ ದೃಶ್ಯಗಳನ್ನು ಆ ಕಾಲಕ್ಕೆ ಹೊಂದುವಂತೆ AI ಮೂಲಕ ರೂಪಿಸಲಾಗುತ್ತಿದೆ. ಕಪ್ಪು–ಬಿಳುಪು ಅಥವಾ ಹಳೆಯ ಫಿಲ್ಮ್ ಕ್ಯಾಮೆರಾದ ಛಾಯಾಚಿತ್ರದಂತೆ ಚಿತ್ರಕ್ಕೆ ರೂಪ ನೀಡುವುದರಿಂದ, ಅವು ನಿಜವಾಗಿಯೂ ಹಲವು ದಶಕಗಳ ಹಿಂದಿನ ಚಿತ್ರಗಳಂತೆ ಕಾಣುತ್ತಿವೆ.

'ನಾನು 80 ರ ದಶಕದಲ್ಲಿ ಹಿಂದೆ ಇದ್ದಿದ್ದರೆ..?' ಇತ್ತೀಚಿನ ಟ್ರೆಂಡ್‌ನಲ್ಲಿ ವ್ಯಕ್ತಿಯ ಇಂದಿನ ಫೋಟೋವನ್ನು ಆಧಾರವಾಗಿಟ್ಟುಕೊಂಡು, ಅವರು 70 ಅಥವಾ 80 ವರ್ಷಗಳ ಹಿಂದೆ ಬದುಕಿದ್ದರೆ ಹೇಗೆ ಕಾಣುತ್ತಿದ್ದರು ಎಂಬ ಕಲ್ಪನೆಯನ್ನು ಚಿತ್ರವಾಗಿ ರೂಪಿಸಲಾಗುತ್ತಿದೆ. ಕೆಲವರು ತಮ್ಮ ಕುಟುಂಬದ ಸದಸ್ಯರನ್ನೂ ಹಳೆಯ ಕಾಲದ ಪರಿಸರದಲ್ಲಿ ನಿಲ್ಲಿಸಿ, ಒಂದು ಕಾಲ್ಪನಿಕ ಕುಟುಂಬದ ಛಾಯಾಚಿತ್ರವನ್ನೇ ಸೃಷ್ಟಿಸುತ್ತಿದ್ದಾರೆ.

ಅಜ್ಜ–ಅಜ್ಜಿಯರ ಕಾಲದ ಉಡುಪು, ಮನೆಯ ವಾತಾವರಣ ಹಾಗೂ ಗ್ರಾಮೀಣ ಬದುಕನ್ನು ಮರುಸೃಷ್ಟಿಸುವ ಚಿತ್ರಗಳು ವಿಶೇಷವಾಗಿ ಗಮನ ಸೆಳೆಯುತ್ತಿವೆ. ತಮ್ಮ ಊರು ಹಿಂದಿನ ಕಾಲದಲ್ಲಿ ಹೇಗಿರಬಹುದಿತ್ತು ಎಂಬ ಕಲ್ಪನೆಯನ್ನೂ ಎಐ ಮೂಲಕ ಚಿತ್ರ ರೂಪದಲ್ಲಿ ತೋರಿಸುತ್ತಿರುವುದು ಈ ಟ್ರೆಂಡ್‌ನ ಮತ್ತೊಂದು ವಿಶೇಷತೆಯಾಗಿದೆ.

ವಾಟ್ಸ್‌ಆ್ಯಪ್ ಸ್ಟೇಟಸ್‌ನಿಂದ ಇನ್‌ಸ್ಟಾಗ್ರಾಂವರೆಗೆ ಮೊದಲಿಗೆ WhatsApp Statuಗಳಲ್ಲಿ ಸಣ್ಣ ಪ್ರಮಾಣದಲ್ಲಿ ಕಾಣಿಸಿಕೊಂಡಿದ್ದ ಈ ರೀತಿಯ AI ಚಿತ್ರಗಳು ಇದೀಗ Instagram ಹಾಗೂ Facebookನಲ್ಲಿಯೂ ವ್ಯಾಪಕವಾಗಿ ಹಂಚಿಕೆಯಾಗುತ್ತಿವೆ. ಕೆಲವರು ಒಂದೇ ವ್ಯಕ್ತಿಯ 'ಇಂದಿನ ಕಾಲ–ಹಳೆಯ ಕಾಲ'ದ ಚಿತ್ರಗಳನ್ನು ಜೋಡಿಸಿ ಪ್ರಕಟಿಸುತ್ತಿದ್ದರೆ, ಮತ್ತಷ್ಟು ಮಂದಿ AI ಚಿತ್ರಗಳೊಂದಿಗೆ ಹಳೆಯ ನೆನಪುಗಳನ್ನು ಬರಹದ ಮೂಲಕ ಹಂಚಿಕೊಳ್ಳುತ್ತಿದ್ದಾರೆ.




■ ಹಳೆಯ ಕಾಲದ ಛಾಯಾಚಿತ್ರಗಳಂತೆ ಚಿತ್ರ ಸೃಷ್ಟಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೆ; 'ಹಳೆಯ ನೆನಪು । ಹೊಸ ತಂತ್ರಜ್ಞಾನ'ಕ್ಕೆ ಯುವಜನರ ಮಾರುಹೋಗುವಿಕೆ

ಇದರಿಂದ ಕೇವಲ ಫೋಟೋ ಎಡಿಟಿಂಗ್ ಮಾತ್ರವಲ್ಲದೆ, ಕಲ್ಪನೆಯನ್ನು ದೃಶ್ಯ ರೂಪಕ್ಕೆ ಪರಿವರ್ತಿಸುವ ಹೊಸ ಡಿಜಿಟಲ್ ಸಂಸ್ಕೃತಿ ರೂಪುಗೊಳ್ಳುತ್ತಿರುವುದು ಕಂಡುಬರುತ್ತಿದೆ.

ನಿಜವಾದ ಹಳೆಯ ಚಿತ್ರವೇ? AI ಸೃಷ್ಟಿಯೇ? AI ತಂತ್ರಜ್ಞಾನದಿಂದ ಸೃಷ್ಟಿಯಾಗುವ ಚಿತ್ರಗಳು ಅತ್ಯಂತ ಸಹಜವಾಗಿ ಕಾಣಿಸಿಕೊಳ್ಳುವುದರಿಂದ ಕೆಲವೊಮ್ಮೆ ಅವು ನಿಜವಾದ ಹಳೆಯ ಛಾಯಾಚಿತ್ರಗಳೇ ಎಂಬ ಗೊಂದಲವೂ ಉಂಟಾಗಬಹುದು. ಹೀಗಾಗಿ ಇಂತಹ ಚಿತ್ರಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುವಾಗ ಅವು AI ಮೂಲಕ ಸೃಷ್ಟಿಸಲಾದ ಅಥವಾ ಮರುಸೃಷ್ಟಿಸಲಾದ ಚಿತ್ರಗಳು ಎಂಬುದನ್ನು ತಿಳಿಸುವುದು ಸೂಕ್ತ. ತಂತ್ರಜ್ಞಾನವನ್ನು ಸೃಜನಶೀಲವಾಗಿ ಬಳಸಿಕೊಂಡು ಇತಿಹಾಸ, ಕುಟುಂಬದ ನೆನಪು ಮತ್ತು ಗ್ರಾಮೀಣ ಬದುಕಿನ ಕಲ್ಪನೆಗಳನ್ನು ಹೊಸ ಪೀಳಿಗೆಗೆ ಪರಿಚಯಿಸುವ ಅವಕಾಶವೂ ಇದರಿಂದ ದೊರೆಯುತ್ತಿದೆ. ಒಟ್ಟಿನಲ್ಲಿ, ಹಿಂದಿನ ತಲೆಮಾರಿನ ನೆನಪುಗಳಿಗೆ ಆಧುನಿಕ ತಂತ್ರಜ್ಞಾನದ ಸ್ಪರ್ಶ ನೀಡುತ್ತಿರುವ AI, ಸಾಮಾಜಿಕ ಜಾಲತಾಣಗಳಲ್ಲಿ ಹೊಸ ರೀತಿಯ ಛಾಯಾಚಿತ್ರ ಸಂಸ್ಕೃತಿಗೆ ನಾಂದಿ ಹಾಡಿದೆ. 'ನೋಡದ ಕಾಲವನ್ನು ಚಿತ್ರದಲ್ಲಿ ನೋಡುವ' ಕುತೂಹಲವೇ ಈ ಹೊಸ ಟ್ರೆಂಡ್‌ಗೆ ಪ್ರಮುಖ ಆಕರ್ಷಣೆಯಾಗಿದೆ.

**ವಿಶೇಷ ಮಾಹಿತಿ**

**AI ಚಿತ್ರಗಳ ಹೊಸ ಪ್ರಯೋಗಗಳು**
**70–80 ರ ದಶಕದ ಕಾಲಘಟ್ಟದ ವಾತಾವರಣ**
**ಹಳೆಯ ಕಾಲದ ಉಡುಪು ಮತ್ತು ಜೀವನಶೈಲಿ**
**ಕಪ್ಪು–ಬಿಳುಪು / ವಿಂಟೇಜ್ ಛಾಯಾಚಿತ್ರದ ಪರಿಣಾಮ**
**ಹಳೆಯ ಮನೆ, ರಸ್ತೆ, ಸಂತೆ, ಶಾಲೆ, ಜಾತ್ರೆಗಳ ಮರುಸೃಷ್ಟಿ**
**'ಹಿಂದೆ ಹೇಗಿದ್ದೆ?' ಎಂಬ ಕಲ್ಪನೆಯ ವೈಯಕ್ತಿಕ ಚಿತ್ರಗಳು**
**WhatsApp, Instagram, Facebookಗಳಲ್ಲಿ ವ್ಯಾಪಕ ಹಂಚಿಕೆ**




# ಶ್ರಾವಣ ಸಪ್ತಾಹ ಸಮಾರೋಪ: ಸುಗಮ ಸಂಗೀತ

■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ಪಟ್ಟಣದ ಹೊರವಲಯದಲ್ಲಿರುವ ಲಿಂ. ಸಾಧು ಶಿವಪ್ಪಜ್ಜನ ಆಶ್ರಮದಲ್ಲಿ ಶುಕ್ರವಾರ ಶ್ರಾವಣ ಮಾಸದ ಪ್ರಯುಕ್ತ ಹಮ್ಮಿಕೊಂಡಿದ್ದ ಭಜನೆ ಹಾಗೂ ಸುಗಮ ಸಂಗೀತ ಕಾರ್ಯಕ್ರಮ ಜರುಗಿತು.

ಬೆಳಗ್ಗೆ ಸಾಧು ಶಿವಪ್ಪಜ್ಜನ ಗದ್ದುಗೆಗೆ ಮಹಾರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ ನಡೆಯಿತು.

ಕನಮಡಿ, ತಿಕೋಟಾ, ಸುತ್ತಲಿನ ಗ್ರಾಮಗಳ ಭಜನಾ ತಂಡಗಳಿಂದ ಬೆಳಗಿಂದ ಸಾಯಂಕಾಲದ ವರೆಗೆ ಭಜನೆ, ಸಂಗೀತ ಕಾರ್ಯಕ್ರಮ ನಡೆಯಿತು. ಪಟ್ಟಣದ ನೂರಾರು ಭಕ್ತರು ಭಾಗವಹಿಸಿದ್ದರು.

ಮಾಣಿಕ ಬಿ. ಕುಂಬಾರ, ಜಗದೀಶ ಎಂ. ಕುಂಬಾರ, ಈಶ್ವರ ಕುಂಬಾರ, ಫರ್ಣೇಕರ್, ನಾಗೇಶ ಹಿರೇಮಠ, ಪ್ರೊ.ಬಿ.ಎಸ್.ಬೆಳಗಲಿ, ಮಲ್ಲಿಕಾರ್ಜುನ ಸಾಹು ಕುರ್ಪಿ, ಪಟ್ಟಣದ ಮುಖಂಡರು, ಯುವಕರು, ನೂತನ ಕಲಾ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ನೇಕಾರ ಸಮ್ಮಾನ್ ಯೋಜನೆಗೆ ಆರ್ಥಿಕ ನೆರವಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೈಮಗ್ಗ ಮತ್ತು ಜವಳಿ ಇಲಾಖೆಯು 2026–27ನೇ ಸಾಲಿನ ನೇಕಾರ ಸಮ್ಮಾನ್ ಯೋಜನೆಯಡಿ ಜಿಲ್ಲೆಯ ಅರ್ಹ ಕೈಮಗ್ಗ ಹಾಗೂ ವಿದ್ಯುತ್ ಮಗ್ಗ ನೇಕಾರರಿಗೆ ವಾರ್ಷಿಕ 5,000 ರೂ. ಆರ್ಥಿಕ ನೆರವು ನೀಡಲು ಅರ್ಜಿಗಳನ್ನು ಆಹ್ವಾನಿಸಿದೆ.

ಆಸಕ್ತ ಹಾಗೂ ಅರ್ಹ ನೇಕಾರರು ಸೆ. 16 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹತಾ ಮಾನದಂಡಗಳು ಪ್ರಸ್ತುತ ಸಕ್ರಿಯವಾಗಿ ನೇಕಾರಿಕೆ ಹಾಗೂ ಅದಕ್ಕೆ ಸಂಬಂಧಿಸಿದ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರಬೇಕು. ಅರ್ಜಿದಾರರು ಕಡ್ಡಾಯವಾಗಿ ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ ಅಥವಾ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ನೋಂದಾಯಿಸಿಕೊಂಡಿರಬೇಕು. 2025–26ನೇ ಸಾಲಿನಲ್ಲಿ ಸೌಲಭ್ಯ ಪಡೆದವರಲ್ಲಿ ಮೃತರಾದವರು, ವೃತ್ತಿ ಬಿಟ್ಟವರು ಮತ್ತು ಬೇರೆಡೆಗೆ ಸ್ಥಳಾಂತರಗೊಂಡವರನ್ನು ಈ ಸಾಲಿನಲ್ಲಿ ಹೊರಗಿಡಲಾಗುವುದು.

ಕಳೆದ ಸಾಲಿನಲ್ಲಿ ನೋಂದಣಿಯಾಗದ ಅರ್ಹ ನೇಕಾರರಿಗೆ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಅಗತ್ಯವಿರುವ ದಾಖಲೆಗಳು ಆಧಾರ್ ಕಾರ್ಡ್ ಹಾಗೂ ರೇಷನ್ ಕಾರ್ಡ್ ಆಧಾರ್ ಲಿಂಕ್ ಆಗಿರುವ ಬ್ಯಾಂಕ್ ಪಾಸ್ ಬುಕ್ ನೇಕಾರ ಸಮ್ಮಾನ್ ಐ.ಡಿ / ಪೆಹಚಾನ್ ಕಾರ್ಡ್ / ನೇಕಾರರ ಗುರುತಿನ ಚೀಟಿ ನೇಕಾರಿಕೆ ವೃತ್ತಿಯಲ್ಲಿ ತೊಡಗಿರುವ ಇತ್ತೀಚಿನ ಭಾವಚಿತ್ರ ಪಿಎಂಜೆಜೆಬಿವೈ/ಪಿಎಂ–ಎಸ್ ಬಿವೈ ನೋಂದಣಿ/ನವೀಕರಣದ ಬ್ಯಾಂಕ್ ಸ್ಟೇಟ್‌ಮೆಂಟ್ ಪ್ರತಿ ಅರ್ಜಿ ಸಲ್ಲಿಸುವ ವಿವರ ಅರ್ಹ ನೇಕಾರರು ತಮ್ಮ ವಿವರಗಳನ್ನು ಸ್ಥಳೀಯ ಕೈಮಗ್ಗ ಅಭಿವೃದ್ಧಿ ನಿಗಮ, ನೇಕಾರ ಸಹಕಾರ ಸಂಘಗಳ ಮೂಲಕ ಅಥವಾ ನೇರವಾಗಿ ಸಹಾಯಕ ನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಡಿ.ಐ.ಸಿ ಕಂಪೌಂಡ್, ಶಿಕಾರಖಾನೆ, ವಿಜಯಪುರ. ಇಲ್ಲಿಗೆ ಸಲ್ಲಿಸಬಹುದು. ಸೆ. 16 ಅರ್ಜಿ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ:9538114434/9611297674 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಗಣೇಶ ಚತುರ್ಥಿ: ಮದ್ಯ ಮಾರಾಟ ನಿಷೇಧಿಸಿ ಆದೇಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗೌರಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗೂ ವಿಸರ್ಜನೆ ಕಾಲಕ್ಕೆ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಹಾಗೂ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಎಲ್ಲ ತರಹದ ಮದ್ಯ ಮಾರಾಟ, ಸಂಗ್ರಹಣೆ ಹಾಗೂ ಹಂಚಿಕೆಯನ್ನು ನಿಷೇಧಿಸಿ ಜಿಲ್ಲಾ ದಂಡಾಧಿಕಾರಿಗಳಾದ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಆದೇಶ ಹೊರಡಿಸಿದ್ದಾರೆ.

ಗಣೇಶ ಮೂರ್ತಿ ಪ್ರತಿಷ್ಠಾಪನೆ ದಿನವಾದ ಸೆ.14ರ ಬೆಳಿಗ್ಗೆ 6ರಿಂದ ಸೆ.15ರ ಬೆಳಿಗ್ಗೆ 6 ಗಂಟೆಯವರೆಗೆ ಹಾಗೂ 5ನೇ ದಿನದ ಗಣೇಶ ಮೂರ್ತಿ ವಿಸರ್ಜನೆ ಪ್ರಯುಕ್ತ ಸೆ.18ರ ಬೆಳಿಗ್ಗೆ 6 ಗಂಟೆಯಿಂದ ಸೆ.19ರ ಬೆಳಿಗ್ಗೆ 6 ಗಂಟೆಯವರೆಗೆ, 7ನೇ ದಿನದ ವಿಸರ್ಜನೆ ಪ್ರಯುಕ್ತ ಸೆ.20ರ ಬೆಳಿಗ್ಗೆ 6 ಗಂಟೆಯಿಂದ ಸೆ.21ರ ಬೆಳಿಗ್ಗೆ 6 ಗಂಟೆಯವರೆಗೆ, 9ನೇ ದಿನದ ವಿಸರ್ಜನೆ ಪ್ರಯುಕ್ತ ಸೆ.22ರ ಬೆಳಿಗ್ಗೆ 6 ಗಂಟೆಯಿಂದ ಸೆ.23ರ ಬೆಳಿಗ್ಗೆ 6 ಗಂಟೆಯವರೆಗೆ ಹಾಗೂ 11ನೇ ದಿನದ ವಿಸರ್ಜನೆ ಪ್ರಯುಕ್ತ ಸೆ.24ರ ಬೆಳಿಗ್ಗೆ 6 ಗಂಟೆಯಿಂದ ಸೆ.25ರ ಬೆಳಿಗ್ಗೆ 6 ಗಂಟೆಯವರೆಗೆ ಜಿಲ್ಲೆಯಾದ್ಯಂತ ಎಲ್ಲ ತರಹದ ಮದ್ಯ ಮಾರಾಟ, ಸಂಗ್ರಹಣೆ ಮತ್ತು ಹಂಚಿಕೆಯನ್ನು ಸಂಪೂರ್ಣವಾಗಿ ನಿಷೇಧಿಸಿ ಆದೇಶಿಸಲಾಗಿದೆ.


# ಸಂಪೂರ್ಣವಾಗಿ ಹಾಳಾಗಿ ಹೋದ ಚೌಡಾಪೂರ ಗ್ರಾಮದ ರಸ್ತೆ

ಅಫಜಲಪುರ:ತಾಲೂಕಿನ ಚೌಡಾಪೂರ ಗ್ರಾಮದ ಪ್ರಮುಖ ಶುಕ್ರವಾರದ ಸಂತೆ ಕಟ್ಟೆ ಹಾಗೂ ಒಳ ರಸ್ತೆಗಳು ಸಂಪೂರ್ಣವಾಗಿ ಹಾಳಾಗಿ ಹೋಗಿದ್ದು, ಚರಂಡಿ ಮಯವಾಗಿವೆ ಎಂದು ಸಂತೆ ಕಟ್ಟೆ ಬಡಾವಣೆಯ ನಿವಾಸಿಗಳು ಹಾಗೂ ಚೌಡಾಪೂರ ಗ್ರಾಮದ ಗ್ರಾಮಸ್ಥರು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರಸ್ತೆ ಹಾಳಾಗಿರುವುದರಿಂದ ದೈನಂದಿನ ಬದುಕು ಸಂಕಷ್ಟಕ್ಕೆ ಸಿಲುಕಿದೆ.

# ಹೊಳಲ್ಕೆರೆ ಸಮಗ್ರ ನೀರಾವರಿ ಯೋಜನೆಗೆ ಒತ್ತು ನೀಡುವ ವಿಶ್ವಾಸ ಭದ್ರಾ ಕಾಲುವೆಗೆ ಬಾಗಿನ ಅರ್ಪಿಸಿದ ಶಿವಾನಂದ ತಗಡೂರು

■ ಉದಯರಶ್ಮಿ ದಿನಪತ್ರಿಕೆ



ಹೊಳಲ್ಕೆರೆ: ಅರೆ ಮಲೆನಾಡು ಪ್ರದೇಶವಾದ ಹೊಳಲ್ಕೆರೆ ತಾಲೂಕಿಗೆ ಸಮಗ್ರ ನೀರಾವರಿ ಯೋಜನೆ ಜಾರಿಗೊಳಿಸಲು ಶಾಸಕ ಡಾ. ಎಂ. ಚಂದ್ರಪ್ಪ ಅವರು ಒತ್ತು ನೀಡಲಿದ್ದಾರೆ. ಈ ಕುರಿತು ಅವರೊಂದಿಗೆ ತಾವು ಕೂಡ ಚರ್ಚಿಸುವುದಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹೇಳಿದರು.

ತಾಲೂಕಿನ ಬೊಮ್ಮನಹಳ್ಳಿ ಬಳಿ ಭದ್ರಾ ಮೇಲ್ದಂಡೆ ಶಾಖಾ ಕಾಲುವೆಗೆ ಶುಕ್ರವಾರ ಬಾಗಿನ ಅರ್ಪಿಸಿ, ಜಕ್ಕನಹಳ್ಳಿ ಜಂಕ್ಷನ್‌ನ ತೊಟ್ಟಿ ವೀಕ್ಷಿಸಿದ ಬಳಿಕ ಅವರು ಮಾತನಾಡಿದರು.

ಬಯಲುಸೀಮೆ ಪ್ರದೇಶವಾದ ಚಿತ್ರದುರ್ಗ ಜಿಲ್ಲೆಗೆ ಭದ್ರಾ ನೀರು ಹರಿಯುತ್ತಿರುವುದನ್ನು ನೋಡಿದಾಗ ತುಂಬಾ ಸಂತೋಷವಾಗುತ್ತಿದೆ. ನೀರು ಹರಿಯುವುದನ್ನು ಕಣ್ತುಂಬಿಕೊಳ್ಳಲು ಜನರು ಕುಟುಂಬ ಸಮೇತರಾಗಿ ಬರುತ್ತಿರುವುದು ಈ ಯೋಜನೆಯ ಮಹತ್ವವನ್ನು ತೋರಿಸುತ್ತದೆ ಎಂದರು.

ಚಿತ್ರದುರ್ಗ ಜಿಲ್ಲೆಗೆ ಭದ್ರಾ ಯೋಜನೆ ಜಾರಿಗೊಳಿಸುವುದು ದಶಕಗಳ ಕನಸಾಗಿತ್ತು. ನೀರಾವರಿ ಹೋರಾಟ ಸಮಿತಿ ರಚಿಸುವ ಮೂಲಕ ಈ ಹೋರಾಟಕ್ಕೆ ಮೊದಲ ಹೆಜ್ಜೆ ಇಟ್ಟವರು ಪತ್ರಕರ್ತರು ಎನ್ನುವುದು ನಮಗೆ ಹೆಮ್ಮೆಯ ಸಂಗತಿ. ನಂತರ ರೈತ ಸಂಘಟನೆಗಳು, ರಾಜಕೀಯ ಮುತ್ಸದ್ದಿಗಳು ಹಾಗೂ ವಿವಿಧ ಸಂಘಟನೆಗಳು ಕೈಜೋಡಿಸಿ ನಡೆಸಿದ ಹೋರಾಟದ ಫಲವಾಗಿ ಇಂದು ಭದ್ರಾ ನೀರು ಜಿಲ್ಲೆಗೆ ಹರಿಯುವಂತಾಗಿದೆ. ಇದೊಂದು ಐತಿಹಾಸಿಕ ಕ್ಷಣ ಎಂದು ಬಣ್ಣಿಸಿದರು.

ಸಮಗ್ರ ನೀರಾವರಿ ಯೋಜನೆಯ ಕೆಲವು ಅಂಶಗಳನ್ನು ಅವಲೋಕಿಸಿದಾಗ ಹೊಳಲ್ಕೆರೆ ತಾಲೂಕಿಗೆ ಒಂದಿಷ್ಟು ಅನ್ಯಾಯವಾಗಿರುವುದು ಕಂಡುಬರುತ್ತದೆ. ಸದ್ಯ ಹರಿಯುತ್ತಿರುವ ನೀರು ಪ್ರಾಯೋಗಿಕ ಹಂತದಲ್ಲಿದೆ. ಶಾಸಕ ಡಾ. ಎಂ. ಚಂದ್ರಪ್ಪ ಅವರು ಉತ್ಸಾಹಿ ಹಾಗೂ ರೈತರು ಮತ್ತು ಕ್ಷೇತ್ರದ ಜನರ ಹಿತ ಬಯಸುವವರಾಗಿದ್ದು, ಮುಂದಿನ ವರ್ಷ ಭದ್ರಾ ನೀರು ಹರಿಯುವಷ್ಟರಲ್ಲಿ ಹೊಳಲ್ಕೆರೆ ತಾಲೂಕನ್ನು ಸಮಗ್ರ ನೀರಾವರಿ ಯೋಜನೆಯ ವ್ಯಾಪ್ತಿಗೆ ಒಳಪಡಿಸುವ ವಿಶ್ವಾಸವಿದೆ ಎಂದರು.

ರೈತ ಮುಖಂಡ ಚನ್ನಸಮುದ್ರ ದಾನವೇಂದ್ರ, ನಿವೃತ್ತ ಸೈನಿಕ ಅರಭಘಟ್ಟ ಮಿಲಿಟರಿ ಮಲ್ಲೇಶ್ ಮಾತನಾಡಿ, ಜಿಲ್ಲೆಗೆ ಭದ್ರಾ ನೀರು ಹರಿಯುವುದು ಕನಸಿನ ಮಾತು ಎಂಬ ಭಾವನೆಯಿತ್ತು. ಇದೀಗ ಗೌರಿ–ಗಣೇಶ ಹಬ್ಬದ ಸಂದರ್ಭದಲ್ಲಿ ಭದ್ರಾ ನೀರು ಹರಿದಿರುವುದು ಅಪಾರ ಸಂತಸ ತಂದಿದೆ ಎಂದರು.

## ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ.ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯ ವಿದ್ಯಾರ್ಥಿಗಳ ಸಾಧನೆ

# ಜಿಲ್ಲಾ ಮಟ್ಟದ ಮ್ಯಾರಾಥಾನ್ ಸ್ಪರ್ಧೆಯಲ್ಲಿ ಸಾಧನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಎಚ್‌ಐವಿ/ಏಡ್ಸ್ ತಡೆಗಟ್ಟುವಿಕೆ, ಚಿಕಿತ್ಸೆ ಹಾಗೂ ಕಳಂಕ, ತಾರತಮ್ಯ ನಿರ್ಮೂಲನೆ ಜಾಗೃತಿ ಅಭಿಯಾನದ ಭಾಗವಾಗಿ ಎಸ್.ಬಿ.ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಸ್ವಯಂ ಸೇವಕರ ನೇತೃತ್ವದಲ್ಲಿ ಸೆ.08 ರಂದು ಜಿಲ್ಲಾ ಮಟ್ಟದ 5 ಕಿ.ಮೀ ಮ್ಯಾರಾಥಾನ್ ಸ್ಪರ್ಧೆ ಹಮ್ಮಿಕೊಳ್ಳಲಾಯಿತು. ನಗರದ ಗೋಲ್ ಗುಂಬಜ್‌ನಿಂದ ಜಿಲ್ಲಾ ಆಸ್ಪತ್ರೆಯವರೆಗೆ ನಡೆದ ಮ್ಯಾರಾಥಾನಲ್ಲಿ ಎಸ್.ಬಿ.ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದ ಅಜಯ್ ತನೇಕೇದಾರ್ ದ್ವಿತೀಯ ಸ್ಥಾನ 3000 ನಗದು ಬಹುಮಾನ ಪಡೆದುಕೊಂಡರು. ಅದೆ ತೆರನಾಗಿ ಭಾಗವಹಸಿದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ನೀಡಲಾಯಿತು.ಭಾಗವಹಿಸಿದ ವಿದ್ಯಾರ್ಥಿಗಳ ಸಾಧನೆಗೆ ಕಾಲೇಜಿನ ಪ್ರಾಚಾರ್ಯ ಡಾ.ಎ.ಟಿ.ಶ್ರೀನಿವಾಸ, ದೈಹಿಕ ನಿರ್ದೇಶಕ ಎಸ್.ಎ.ಪಾಟೀಲ, ಐಕ್ಯೂಎಸಿ ಸಂಯೋಜಕ ಡಾ.ಪಿ.ಎಸ್.ಪಾಟೀಲ, ಎನ್‌ಎಸ್‌ಎಸ್ ಅಧಿಕಾರಿಗಳಾದ ಡಾ.ಮಿಲನ್ ರಾಠೋಡ ಡಾ.ತರನ್ನುಮ್ ಜಬೀನ್ ಖಾನ್ ಪ್ರಶಸ್ತಿ ಪ್ರಮಾಣ ಪತ್ರ ನೀಡಿ ಗೌರವಿಸಿದರು.



**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR